

# ಸಿಹಿ ಕಹಿ


ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 06 | Issue : 288 | Friday 05-04-2024 | E-mail : maruti.b.hosamani76@gmail.com | Page: 4 | Price : Rs. 1/-


## ಕುಂಬಾರರ ಬದುಕಿಗಿಲ್ಲ ಸೌಲಭ್ಯದ ಒರತೆ, ಕುಶಲತೆ ಮರೆಯುತ್ತಿವೆ–ಮಡಿಕೆ ಮಾಡುವ ಕೈಗಳು

**ಕಾನಾ ಹೊಸಹಳ್ಳಿ :** ಡಿಜಿಟಲ್ ಯುಗದಲ್ಲಿ ಜೇಡಿ ಮಣ್ಣನ್ನು ಹದ ಮಾಡಿ ಮಾಡಿದ ಮಡಿಕೆ, ಕುಡಿಕೆ, ಒಲೆ ಸೇರಿದಂತೆ ವಿವಿಧ ಸಾಮಗ್ರಿ ವಸ್ತುಗಳನ್ನು ಜನರು ಖರೀದಿ ಮಾಡುತ್ತಿಲ್ಲ. ಹೀಗಾಗಿ ಕುಂಬಾರಿಕೆ ಉದ್ಯಮದಲ್ಲಿ ನಷ್ಟ ಅನುಭವಿಸುತ್ತಿರುವುದರಿಂದ ಕುಂಬಾರರ ಕುಶಲತೆ ಗ್ರಾಮೀಣ ಪ್ರದೇಶದಿಂದ ಹಂತ, ಹಂತವಾಗಿ ಕಣ್ಮರೆಯಾಗುತ್ತಿದೆ. ಕುಂಬಾರರು ತಮ್ಮ ಜೀವನಕ್ಕೆ ಅಗತ್ಯವಿರುವ ರೂಪ ಕೊಟ್ಟುಕೊಳ್ಳಲು ಇನ್ನೂ ಸಾಧ್ಯವಾಗಿಲ್ಲ ಎಂಬುದಕ್ಕೆ ತಾಲ್ಲೂಕಿನ ಚಿಕ್ಕ ಜೋಗಿಹಳ್ಳಿ ಗ್ರಾಮದ ಚೌಡಪ್ಪ ಕುಂಬಾರನ ಬದುಕು ಸೂಕ್ತ ಉದಾಹರಣೆ. ಮುತ್ತಾತ, ತಾತ ತಂದೆಯವರ ಕಾಲದಿಂದಲೂ ಈ ಕುಟುಂಬಗಳು ತನ್ನ ಕುಲ ಕಸುಬಾಗಿ ಕುಂಬಾರಿಕೆ ನಂಬಿಕೊಂಡು ಜೀವನ ಸಾಗಿಸುತ್ತಿವೆ. ತಾಲೂಕಿನಲ್ಲಿ ಅನೇಕ ಕುಂಬಾರರು ಈ ಕಸುಬು ಕುಂಬಾರಿಕೆ ನಂಬಿಕೊಂಡು ಜೀವನ ನಡೆಸುತ್ತಿದ್ದಾರೆ. ಒಂದು ಮಡಿಕೆ ತಯಾರಿಕೆ ಕಾರ್ಯ ಮುಗಿಯಲು 7–10 ಹಂತಗಳು ಆವಶ್ಯಕವಿದೆ. ಒಬ್ಬರು ದಿನವೊಂದಕ್ಕೆ 10–12 ಮಡಿಕೆಗಳನ್ನು ತಯಾರಿಸುತ್ತಾರೆ. ನಂತರ ಇವುಗಳನ್ನು ಒಣಗಿಸಿ, ಸುಟ್ಟು ಮಾರಾಟಕ್ಕೆ ಕಳಿಸಲು ಕನಿಷ್ಠ ಎಂದರೂ 10 ದಿನ ಕಾಲಾವಕಾಶ ಅಗತ್ಯವಿದೆ ಎಂದು ಕುಂಬಾರರು ಹೇಳುತ್ತಾರೆ. ಈ ಹಿಂದೆ ಮಡಿಕೆಯಿಲ್ಲದೇ ಮಾನವನ ಬದುಕಿಲ್ಲ



ಅನ್ನುವಷ್ಟು ಮಡಿಕೆಯೇ ಮುಖ್ಯವಾಗಿತ್ತು. ಆ ಮಾತು ಈಗ ಸುಳ್ಳೇನೋ ಅನ್ನುವಷ್ಟು ಪರಿಸ್ಥಿತಿ ಬದಲಾಗಿದೆ. ಆಧುನೀಕತೆಯ ಭರಾಟೆಯಲ್ಲಿ ಸ್ಟೀಲ್, ಅಲ್ಯೂಮಿನಿಯಂ, ಪ್ಲಾಸ್ಟಿಕ್, ಫೈಬರ್ ಬಂದು ಮಡಿಕೆಗಳು ಮಾಯವಾಗುತ್ತಲೇ ಇದ್ದವು. ಇದರಿಂದ ಕುಂಬಾರರು ಆತಂಕದ ನಡುವೆಯೇ ವೃತ್ತಿ ಸಾಗಿಸುತ್ತಿದ್ದಾರೆ. ಈಗ ಪ್ರಸಕ್ತ ಬೇಸಿಗೆಯ ಬಿಸಿಲಿನ ತಾಪ ವಿಪರೀತ ಹೆಚ್ಚಿದ್ದರಿಂದ ಜನತೆ ಅನಿವಾರ್ಯವಾಗಿ ಮಡಿಕೆಯ ಮೊರೆ ಹೋಗುತ್ತಿದ್ದರಿಂದ ಮಾರಾಟದಲ್ಲಿ ಚೇತರಿಕೆ ಕಂಡು ಅವರಲ್ಲಿ ಸ್ವಲ್ಪ ಪ್ರಮಾಣದ ನೆಮ್ಮದಿ ಕಾಣುತ್ತಿದೆ. ಸುತ್ತಲಿನ ಹಳ್ಳಿಗಳ ಸಂತೆಗೆ ಕಳುಹಿಸಲಾಗುತ್ತದೆ. ಬೇಡಿಕೆ ಇದ್ದ ಸಮಯದಲ್ಲಿ ಮಾರಾಟಗಾರರು ನೇರವಾಗಿ ಇಲ್ಲಿಗೆ ಬಂದು ಕೊಂಡ್ಯೊಯುತ್ತಾರೆ. ಬೇಸಿಗೆಯಲ್ಲಿ ಬೇಡಿಕೆ ಹೆಚ್ಚಾಗಿ ಇರುತ್ತದೆ. ಉಳಿದ ಕಾಲದಲ್ಲಿ ಕೂಲಿ ಕೆಲಸ ನೆಚ್ಚಿಕೊಂಡಿರುವುದು ಹೊಟ್ಟೆ ತುಂಬಿಸುತ್ತಿದೆ. ನಾವು ಶಿಕ್ಷಣ ಸೌಲಭ್ಯದಿಂದ ವಂಚಿತರಾಗಿದ್ದು, ನಮ್ಮ ಮಕ್ಕಳಿಗೆ ಮಾತ್ರ ಶಿಕ್ಷಣ ಕೊಡಿಸಲು ಶ್ರಮಿಸುತ್ತಿದ್ದೇವೆ. ಆದರೆ, ಶಿಕ್ಷಣದ ಜತೆಗೆ ಕುಲಕಸುಬು ಸಹ ಕಲಿಸುತ್ತೇವೆ. ಹೊಟ್ಟೆಗೆ ಅನ್ನ ಹಾಕುವ ಕಸುಬು ಬಿಡಲು ಹೇಗೆ ಸಾಧ್ಯ ಎಂದು ಕುಂಬಾರ ಚೌಡಪ್ಪ ಮತ್ತಿತರರು ಹೇಳುತ್ತಾರೆ. ಇನ್ ಸರ್ಕಾರದಿಂದ ಯಾವುದೇ ಬಗೆಯ ಆರ್ಥಿಕ ನೆರವು ಸಿಕ್ಕಿಲ್ಲ ಎಂದು ದೂರುವ

> ಬೇಸಿಗೆಯಲ್ಲಿ ಬೇಡಿಕೆ ಹೆಚ್ಚಾಗಿ ಇರುತ್ತದೆ. ಉಳಿದ ಕಾಲದಲ್ಲಿ ಕೂಲಿ ಕೆಲಸ ನೆಚ್ಚಿಕೊಂಡಿರುವುದು ಹೊಟ್ಟೆ ತುಂಬಿಸುತ್ತಿದೆ. ಸರ್ಕಾರದಿಂದ ಯಾವುದೇ ಬಗೆಯ ಆರ್ಥಿಕ ನೆರವು ಸಿಕ್ಕಿಲ್ಲ, ಸರ್ಕಾರ ವಸತಿ ಮತ್ತಿತರ ಸೌಲಭ್ಯ ನೀಡಲು ಸಹ ಮನಸ್ಸು ಮಾಡಿಲ್ಲ ಇಂತಹ ಕಷ್ಟದ ಸಮಯದಲ್ಲಿ ನಮ್ಮ ನೆರವಿಗೆ ಸರಕಾರ ಬರಬೇಕು.
> **–ಚೌಡಪ್ಪ ಕುಂಬಾರ**
> **ಚಿಕ್ಕ ಜೋಗಿಹಳ್ಳಿ**

ಅವರು, ಸರ್ಕಾರ ವಸತಿ ಮತ್ತಿತರ ಸೌಲಭ್ಯ ನೀಡಲು ಸಹ ಮನಸ್ಸು ಮಾಡಿಲ್ಲ ಎಂಬುದು ಕುಂಬಾರರ ಅಳಲಾಗಿದೆ.

ಬೇಸಿಗೆ, ಮದುವೆ ಕಾರ್ಯಗಳಿಗೆ ಮಾತ್ರ ಬೇಡಿಕೆ: ಒಂದು ಮಡಿಕೆಗೆ 150 ಹಾಗೂ 170, 208 ರೂಪಾಯಿ ವರೆಗೂ ಮಾರಾಟವಾಗುತ್ತಿದೆ. ಒಂದು ಹೂಜಿಗೆ 230 ರೂಪಾಯಿ ಹಾಗೂ ದೊಡ್ಡ ಹೂಜಿಗೆ 400 ರೂ. ಹೀಗೆ ವಿವಿಧ ಬೆಲೆಗಳಲ್ಲಿ ಬಿಕರಿಯಾಗುತ್ತವೆ. ಮದುವೆ ಕಾರ್ಯ–ಕ್ಕೆ ಅಗತ್ಯವಾದ ಕೇಲು, ದೀಪಗಳು, ಮಗೆ, ಮದುಮಕ್ಕಳಿಗೆ ಬಾಸಿಂಗವನ್ನೂ ಇವರು ತಯಾರಿಸಿಕೊಡುತ್ತಾರೆ. ಬಸವ ಜಯಂತಿ ಸಂದರ್ಭದಲ್ಲಿ ಹೆಚ್ಚು ಮದುವೆ ಕಾರ್ಯಗಳು ನಡೆಯುತ್ತಿವೆ.

**ಹೋಬಳಿ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಕೆ. ಎಸ್.ವೀರೇಶ್.ಕಾನಾ ಹೊಸಹಳ್ಳಿ**

## ಮತ ಕ್ಷೇತ್ರದಿಂದ ಹೊರಗಿರುವ ಮತದಾರರು ಮತದಾನ ದಿನ ಮತಗಟ್ಟೆಗೆ ಬಂದು ಮತದಾನ ಮಾಡಿ: ಶ್ರೀಮತಿ ತಾರಾ



**ಹುನಗುಂದ :** ಉದ್ಯೋಗ ಮತ್ತು ಕಾರ್ಯದ ನಿಮಿತ್ಯ ಬೇರೆ ಕಡೆ ಹೋಗಿದ್ದರೂ ಸಹಿತ ಚುನಾವಣೆ ದಿನದಂದು ತಮ್ಮ ಮತಗಟ್ಟೆಗೆ ಬಂದು ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಾಪಂ ಇಒ ಶ್ರೀಮತಿ ತಾರಾ ಬೇರೆಡೆಗೆ ಇರುವ ಮತದಾರರಿಗೆ ಕರೆ ನೀಡಿದರು.

ಮತಕ್ಷೇತ್ರದ 72 ನೇ. ಮತಗಟ್ಟೆಯ ಲಿಂಗದಕಟ್ಟಿ ಹತ್ತಿರ ಜಿಲ್ಲೆ ಮತ್ತು ತಾಲೂಕಾ ಸ್ವೀಪ್ ಸಮಿತಿ ಹಾಗೂ ಪುರಸಭೆ ಹುನಗುಂದ ಸಹಯೋಗದಲ್ಲಿ ಹಮ್ಮಿಕೊಂಡ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಳೆದ ಚುನಾವಣೆಯಲ್ಲಿ ಮತಕ್ಷೇತ್ರದ ಮತದಾನ ಶೇಕಡಾವಾರು ಕಡಿಮೆ ಆಗಿರುವದರಿಂದ ಈ ಬಾರಿ ಶೇ. 100 ರಷ್ಟು ಮತದಾನ ಆಗುವ ನಿಟ್ಟಿನಲ್ಲಿ ಈ ಸ್ವೀಪ್ ತಂಡದ ಜೊತೆಗೆ ಮತದಾರರ ಕರ್ತವ್ಯವೂ ಅಷ್ಟೆ ಮುಖ್ಯವಾಗಿದೆ. ತಮ್ಮವರು, ನಮ್ಮವರನ್ನು ಒಗ್ಗೂಡಿ ಕೊಂಡು ನಮ್ಮ ಮತದಾನದ ಹಕ್ಕು ಮತ ಚಲಾಯಿಸುವ ಮೂಲಕ ದೇಶದ ಭವಿಷ್ಯ ಕಾಯುವ ಕಾರ್ಯವಾಗಬೇಕು. ಸಂವಿಧಾನದ ಆಶಯದಂತೆ ದೇಶದ ಮತ್ತು ನಮ್ಮ ನಿಮ್ಮೆಲ್ಲರ ಅಭಿವೃದ್ಧಿಪಡಿಸುವ ಅರ್ಹರರಿಗೆ ಮತದಾನ ಮಾಡಬೇಕೆಂದು ಎಂದರು.

ತಹಶೀಲ್ದಾರ ನಿಂಗಪ್ಪ ಬಿರಾದಾರ ಮಾತನಾಡಿ ಯಾರೂ ಮತದಾನದ ಬಗ್ಗೆ ನಿಷ್ಕಾಳಜಿ ಮಾಡಬಾರದು.ಮತದಾನದ ಮೇಲೆ ನಮ್ಮ ದೇಶದ ಭವಿಷ್ಯ ನಿಂತಿದೆ.ಸೋಲು ಮತ್ತು ಗೆಲುವಿಗೆ ಕೇವಲ ಒಂದೆ ಮತ, ಹೀಗಿರುವಾಗ ತಮ್ಮ ಒಂದು ಮತವೂ ಪ್ರಜಾಪ್ರಭುತ್ವಕ್ಕೆ ಅಷ್ಟೆ ಮುಖ್ಯವಾಗಿದೆ. ಆದ್ದರಿಂದ ಈ ಚುನಾವಣೆಯಲ್ಲಿ ಎಲ್ಲರೂ 100 ರಷ್ಟು ಮತದಾನವಾಗಲು ಪ್ರಯತ್ನಿಸೋಣ ಎಂದರು.

ಪುರಸಭೆ ಮುಖ್ಯಾಧಿಕಾರಿ ಪಿ.ಕೆ. ಗುಡದಾರಿ ಮಾತನಾಡಿ ಮತ ಹಾಕಿದರೆ ನನಗೇನು ಬರುತ್ತದೆ ಎಂದು ಅಲಕ್ಷ್ಯ ಬೇಡ, ನಿಮ್ಮ ಪ್ರತಿಯೊಬ್ಬರ ಮತವೂ ಅಭಿವೃದ್ಧಿ ಪುಟಕ್ಕೆ ಸಾಕ್ಷಿಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಕಂದಾಯ ನಿರೀಕ್ಷಕ ಲಿಂಗರಾಜ ಹುನಗುಂಡಿ, ಗ್ರಾಮ ಆಡಳಿತಾಧಿಕಾರಿ ಶಿವಾನಂದ ಕುಂಬಾರ, ಗ್ರಾಮ ಸೇವಕ ಪರಶೂರಾಮ ಚಿಕ್ಕಣ್ಣವರ, ಅಂಗನವಾಡಿ ಕಾಯಕರ್ತೆಯರಾದ ವಿಜಯಲಕ್ಷ್ಮೀ ನಾಶಿ, ಅಕ್ಕಮ್ಮ ಚಿತ್ತರಗಿ, ದೇವಕ್ಕವ್ವ ಈಟಿ, ಸೆಕ್ಟರ್ ಅಧಿಕಾರಿ ಎಚ್.ಜಿ. ಕೊಡಗಲಿ,ಮುತ್ತುರಾಜ ಕಳ್ಳಿಗುಡ್ಡ, ಮುತ್ತು ಹುಣಶಾಳ, ಮಹಾಂತೇಶ ತಾರಿವಾಳ, ಬಾಬು ಲೈನ,ಎಚ್.ಎಚ್. ಚಲವಾದಿ, ಮುತ್ತು ಚಲವಾದಿ, ಬಸವರಾಜ,ಐ.ಕೆ. ಗುಡ್ಡದ ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು. ನಂತರ ಮತದಾನ ಜಾಗೃತಿ ಕುರಿತು ಪ್ರತಿಜ್ಞಾವಿಧಿ ಬೋಧಿಸಲಾಯಿತು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಮಲ್ಲಿಕಾರ್ಜುನ.ಎಂ.ಬಂಡರಗಲ್ಲ ಹುನಗುಂದ**

## ಕಚ್ಚಾ ವಸ್ತು ಪೂರೈಕೆ ಸ್ಥಗಿತ
### ಕೆಎಚ್‌ಡಿಸಿ ನೇಕಾರರು ತ್ರಿಶಂಕು ಸ್ಥಿತಿಯಲ್ಲಿ



**ರಬಕವಿ–ಬನಹಟ್ಟಿ:** ಐದಾರು ತಿಂಗಳುಗಳಿಂದ ಇಲ್ಲಿನ ಕೆ. ಎಚ್. ಡಿ. ಸಿ. ನೇಕಾರರಿಗೆ ಯಾವುದೇ ರೀತಿಯ ಕಚ್ಚಾವಸ್ತುಗಳ ಪೂರೈಕೆಯಾಗದೇ ಸಂಪೂರ್ಣವಾಗಿ ಸ್ಥಗಿತಗೊಂಡಿದೆ. ಇದರಿಂದಾಗಿ ಇಲ್ಲಿನ ನೂರಾರು ಕುಟುಂಬಗಳು ತ್ರಿಶಂಕು ಪರಿಸ್ಥಿತಿಯಲ್ಲಿದ್ದು ಜೀವನ ನಿರ್ವಹಣೆಗೂ ಕಷ್ಟವನ್ನು ಅನುಭವಿಸುತ್ತಿದ್ದಾರೆ ಎಂದು ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ಅಧ್ಯಕ್ಷ ಶಿವಲಿಂಗ ಟಿರಕಿ ತಿಳಿಸಿದರು.

ಭಾನುವಾರ ಇಲ್ಲಿನ ಕೆ. ಎಚ್. ಡಿ. ಸಿ. ಕಾಲೋನಿಯಲ್ಲಿ ನಡೆದ ನೇಕಾರರ ಸಭೆಯಲ್ಲಿ ಅವರು ಮಾತನಾಡಿದರು. ರಾಜ್ಯದ ಕೆ. ಎಚ್. ಡಿ. ಸಿ. ನಿಗಮದಲ್ಲಿ 48 ಸಾವಿರ ನೇಕಾರರು ಇದ್ದರು. ಆದರೆ ಇಂದು ಕೇವಲ 4,200 ಮಗ್ಗಗಳು ಮಾತ್ರ ಉಳಿದುಕೊಂಡಿವೆ. ನಿಗಮವು ನೂರಾರು ಕೋಟಿ ರೂಪಾಯಿ ಸಾಲದ ಹೊರೆಯಲ್ಲಿ ನಲುಗುತ್ತಿದೆ. ಇದರಿಂದಾಗಿ ನಿಗಮವು ಅವಸಾನದ ಅಂಚಿನಲ್ಲಿದೆ. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಕೋಟ್ಯಂತರ ಮೌಲ್ಯದ ಅವ್ಯವಹಾರ ನಡೆದರೂ ಈ ಕುರಿತು ಯಾವುದೇ ತನಿಖೆ ನಡೆದಿಲ್ಲ. ಬನಹಟ್ಟಿಯ ಕೆ. ಎಚ್. ಡಿ. ಸಿ. ಕಾಲೋನಿಯಲ್ಲಿ 40 ವರ್ಷಗಳ ಕಾಲ ವಾಸವಿದ್ದ ನೇಕಾರರ ಕುಟುಂಬಗಳಿಗೆ ಇದುವರೆಗೂ ಸಿಟಿಎಸ್ ಉತಾರೆಗಳನ್ನು ನೀಡಿಲ್ಲ. ಇಲ್ಲಿಯ ಜನರು ಮೂಲ ಸೌಕರ್ಯಗಳಿಂದ ವಂಚಿತರಾಗಿದ್ದಾರೆ.

ಕೆ. ಎಚ್. ಡಿ. ಸಿ. ನೇಕಾರರ ಸಮಸ್ಯೆಗಳ ಕುರಿತು ಮುಖ್ಯಮಂತ್ರಿ ಹಾಗೂ ಜವಳಿ ಸಚಿವರಿಗೆ ಹಲವಾರು ಸಲ ವಿನಂತಿಸಿಕೊಂಡರೂ ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ಮುಂದಿನ ದಿನಗಳಲ್ಲಿ ಇಲ್ಲಿಯ ನೇಕಾರರು ತಮ್ಮ ಬೇಡಿಕೆಗಳಿಗೆ ಆಗ್ರಹಿಸಿ ಹೋರಾಟ ನಡೆಸಲಿದ್ದಾರೆ ಎಂದು ಶಿವಲಿಂಗ ಟಿರಕಿ ತಿಳಿಸಿದರು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಜೋತಾವರ, ಶಂಕರ ಕೊಣ್ಣೂರ, ಶಂಕ್ರೆಪ್ಪ ಗೋಕಾವಿ, ಮಹೇಂದ್ರ ಕವಿಶೆಟ್ಟಿ, ಮಲ್ಲಿಕ್ ಸಾಬ್ ಜಮಾದರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಹುನಗುಂದ ದಿಂದ ಶ್ರೀ ಶೈಲ ಮಲ್ಲಿಕಾರ್ಜುನ ಜಾತ್ರೆಗೆ ವಿಶೇಷ ಬಸ್ ವ್ಯವಸ್ಥೆ: ಅರವಿಂದ ಭಜಂತ್ರಿ

**ಹುನಗುಂದ :** ಆಂಧ್ರದ ಶ್ರೀಶೈಲ ಮಲ್ಲಿಕಾರ್ಜುನ ಜಾತ್ರಾಗೆ ಹೋಗುವ ಯಾತ್ರಿಕರ ಸಂಖ್ಯೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಹುನಗುಂದ ಘಟಕ ದಿಂದ ಶ್ರೀಶೈಲ ಮಲ್ಲಿಕಾರ್ಜುನ ಸನ್ನಿಧಿಗೆ ತೆರಳಲು ಹುನಗುಂದ ಘಟಕ ದಿಂದ ನೇರ ಬಸ್ಸಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಘಟಕ ವ್ಯವಸ್ಥಾಪಕ ಅರವಿಂದ ಭಜಂತ್ರಿ ಹೇಳಿದರು.





ಶ್ರೀಶೈಲ ಜಾತ್ರಾ ನಿಮಿತ್ಯವಾಗಿ ಜಾತ್ರಾ ವಿಶೇಷ ಬಸ್ಸಿಗೆ ಅವರು ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ ಅವರು, ನಮ್ಮ ತಾಲೂಕಿನಿಂದ ಅನೇಕ ಭಕ್ತಾಧಿಗಳು ಮಲ್ಲಿಕಾರ್ಜುನ ಜಾತ್ರೆಗೆ ಹೋಗುತ್ತಿದ್ದು, ಅವರಿಗೆ ಪ್ರಯಾಣದಲ್ಲಿ ತೊಂದರೆ ಯಾಗಬಾರದು ಎನ್ನುವ ದೃಷ್ಟಿಯಿಂದ ಇಲ್ಲಿಂದ ನೇರವಾಗಿ ಬಸ್ಸಿನ ಸೌಲಭ್ಯ ಒದಗಿಸಲಾಗಿದೆ. 50 ಜನ ಭಕ್ತಾಧಿಗಳು ಸೇರಿ ಗ್ರಾಮೀಣ ಪ್ರದೇಶ ದಿಂದಲ ಶ್ರೀಶೈಲಕ್ಕೆ ಹೋಗಬಹುದು. ಇಲ್ಲಿಂದ ಶ್ರೀಶೈಲಕ್ಕೆ ಹೋಗಲು 1 ಸೀಟಿಗೆ ರೂ. 800/–. ಪ್ರಯಾಣಿಕರು ಹೆಚ್ಚಾದರೆ ಹೆಚ್ಚಿನ ಬಸ್ಸುಗಳನ್ನು ಘಟಕ ದಿಂದ ಒದಗಿಸಲಾಗುವದು. ಈ ಜಾತ್ರಾ ಸೌಲಭ್ಯವನ್ನು ಮಲ್ಲಯ್ಯನ ಭಕ್ತಾಧಿಕಾಗಳು ಸದ್ಬಳಕೆ ಮಾಡಿ ಕೊಳ್ಳಬೇಕು ಎಂದರು.

ಜಿ.ಬಿ. ಕಂಬಾಳಿಮಠ, ದುರಗಪ್ಪ ಹಾದಿಮನಿ, ವೀರೇಶ ಕುರ್ತಕೋಟಿ, ಸಂಚಾರಿ ನಿರೀಕ್ಷಕಿ ಶೈಲಾ ಜಿಗಳೂರ, ಎಸ್.ಎಸ್.ಬಡಿಗೇರ, ಸಾರಿಗೆ ನಿಯಂತ್ರಕ, ಜಾತ್ರಾ ಉಸ್ತುವಾರಿ ಎಂ.ಎಸ್, ಮಸರಕಲ್, ಷಣ್ಮುಖ ಆನೇಹೊಸೂರ ಸೇರಿದಂತೆ ಇತರರು ಇದ್ದರು.

**ತಾಲೂಕ ವರದಿಗಾರರು ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಮಲ್ಲಿಕಾರ್ಜುನ. ಎಂ.ಬಂಡರಗಲ್ಲ ಹುನಗುಂದ**

## ಬಾಗಲಕೋಟೆ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ಖಚಿತ

**ರಬಕವಿ–ಬನಹಟ್ಟಿ :** ಬಾಗಲಕೋಟೆ ಲೋಕಸಭಾ ಮತಕ್ಷೇತ್ರದಲ್ಲಿ ಈ ಬಾರಿ ಬಿಜೆಪಿ ಸೋಲು ಖಚಿತವಾಗಿದ್ದು, ಜಿಲ್ಲೆಯ ಜನರು ಬದಲಾವಣೆಯನ್ನು ಬಯಸಿದ್ದಾರೆ.

ಮುಂದಿನ ದಿನಗಳಲ್ಲಿ ಸಂಯಕ್ತಾ ಪಾಟೀಲರಿಂದ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ಅಭಿವೃದ್ಧಿಯ ಕುರಿತು ಲೋಕಸಭೆಯಲ್ಲಿ ಚರ್ಚೆಯಾಗಲಿದೆ ಎಂದು ಜವಳಿ ಸಚಿವ ಶಿವಾನಂದ ಪಾಟೀಲ ತಿಳಿಸಿದರು.

ಭಾನುವಾರ ಸಮೀಪದ ಹೊಸೂರಿನ ತೋಟದ ಮನೆಯಲ್ಲಿ ಪಕ್ಷದ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.



ವಿಜಯಪುರ ಮತ್ತು ಬಾಗಲಕೋಟೆ ಮತಕ್ಷೇತ್ರದ ಸಂಸದರು ಸೇರಿದಂತೆ ರಾಜ್ಯದಿಂದ ಆಯ್ಕೆಯಾದ 26 ಜನ ಸಂಸದರು ಇಲ್ಲಿನ ರಸ್ತೆ , ನೀರು, ತೆರಿಗೆ ಹಾಗೂ ಯುಕೆಪಿ ಕುರಿತು ಲೋಕಸಭೆಯಲ್ಲಿ ಚರ್ಚೆ ಮಾಡದೇ ಇರುವುದರಿಂದ ಜಿಲ್ಲೆಗಳು ಅಭಿವೃದ್ಧಿಯಾಗುತ್ತಿಲ್ಲ. ಅಭಿವೃದ್ಧಿಯ ಆಧಾರದ ಮೇಲೆ ಚುನಾವಣೆಗಳು ನಡೆಯದೇ, ಧಾರ್ಮಿಕ ಭಾವನೆಯ ಮೇಲೆ ಚುನಾವಣೆಯನ್ನು ಮಾಡಲಾಗುತ್ತಿದೆ. ಬಾಗಲಕೋಟೆ ಲೋಕಸಭಾ ಮತಕ್ಷೇತ್ರದಲ್ಲಿ ಇಬ್ಬರು ಹಿಟ್ಲರ್ ಗಳು ಇದ್ದು , ಬಾಗಲಕೋಟೆ ಬಿಟ್ಟರೆ ತೇರದಾಳ ವಿಧಾನ ಸಭಾ ಮತಕ್ಷೇತ್ರದಲ್ಲಿದ್ದಾರೆ. ಹಿಟ್ಲರ್ ಆಡಳಿತ ನಡೆಯಬಾರದು. ಕ್ಷೇತ್ರದಲ್ಲಿ ಏನೂ ಅಭಿವೃದ್ಧಿ ಮಾಡದವರು ಮತ ಕೇಳುತ್ತಿದ್ದಾರೆ ಎಂದು ಸಚಿವ ಶಿವಾನಂದ ಪಾಟೀಲ ಆರೋಪಿಸಿದರು.

ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷದ ಎಲ್ಲ ನಾಯಕರು, ಕಾರ್ಯಕರ್ತರು ಒಗ್ಗಟ್ಟಾಗಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿ ಪಕ್ಷದ ಅಭ್ಯರ್ಥಿಯ ಗೆಲುವಿಗೆ ಶ್ರಮಿಸಬೇಕು ಎಂದು ಸಚಿವ ಪಾಟೀಲ ತಿಳಿಸಿದರು.

ತೇರದಾಳ ಮತಕ್ಷೇತ್ರದ ಕಾಂಗ್ರೆಸ್ ಮುಖಂಡ ಸಿದ್ದೂ ಕೊಣ್ಣೂರ ಮಾತನಾಡಿ, ಕ್ಷೇತ್ರದಲ್ಲಿ ಈಗಾಗಲೇ ಪಕ್ಷದ ಪ್ರಚಾರ ಕುರಿತು ಕಾರ್ಯಕ್ರಮಗಳನ್ನು ಸಿದ್ಧಪಡಿಸಲಾಗಿದೆ. ಬೂತ್ ಮಟ್ಟದ ಕಾರ್ಯಕರ್ತರನ್ನು ನೇಮಿಸಲಾಗುತ್ತಿದೆ. ಕ್ಷೇತ್ರದಲ್ಲಿ ಕಾಂಗ್ರೆಸ್ ಪರವಾದ ಉತ್ತಮ ವಾತಾವರಣವಿದ್ದು, ತೇರದಾಳ ಮತಕ್ಷೇತ್ರದಿಂದ ಸಂಯುಕ್ತಾ ಪಾಟೀಲರಿಗೆ ಇಪ್ಪತ್ತು ಸಾವಿರದಷ್ಟು ಮುನ್ನಡೆಯನ್ನು ನೀಡುತ್ತೇವೆ ಎಂದು ವಿಶ್ವಾಸ ವ್ಯಕ್ತ ಪಡಿಸಿದರು.

ಪಕ್ಷದ ಮುಖಂಡರಾದ ಬಿ. ಎಸ್. ಸಿಂಧೂರ, ನೀಲಕಂಠ ಮುತ್ತೂರ, ಲಕ್ಷ್ಮಣ ದೇಸಾರಟ್ಟಿ, ಭೀಮಶಿ ಮಗದುಮ್, ರಾಜೇಂದ್ರ ಭದ್ರನವರ, ಹಾರೂನ್ ಬೇವೂರ, ರಂಗನಗೌಡ ಪಾಟೀಲ, ಸಂಗಮೇಶ ಬಡಿಗೇರ, ಸಂಗಪ್ಪ ಕುಂದಗೋಳ ಸೇರಿದಂತೆ ಅನೇಕರು ಮಾತನಾಡಿದರು.

ರಾಹುಲ ಕಲಾಲ, ಪರಪ್ಪ ಉರಭಿನವರ, ಸತ್ಯಪ್ಪ ಮಗದುಮ್, ಶ್ರೀಶೈಲ ಮೇಣಿ, ಮುತ್ತಣ್ಣ ಹಿಪ್ಪರಗಿ, ಹಾರೂನ್ ಸಾಂಗ್ಲಿಕರ್, ಶೌಕತ್ ಅತ್ತಾರ ಸೇರಿದಂತೆ ತೇರದಾಳ ಮತಕ್ಷೇತ್ರದ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ದಾಖಲೆ ಇಲ್ಲದ 2.74 ಲಕ್ಷ ರೂ. ವಶಕ್ಕೆ

**ಬಾಗಲಕೋಟೆ :** ಲೋಕಸಭಾ ಚುನಾವಣೆ–2024ರ ಹಿನ್ನಲೆಯಲ್ಲಿ ಮಾದರಿ ನೀತಿ ಸಂಹಿತೆ ಇಲ್ಲಂಘಿಸಿ ರವಿವಾರ ದಾಖಲೆ ಇಲ್ಲದೇ ಕಾರಿನಲ್ಲಿ ಸಾಗಿಸುತ್ತಿದ್ದ 2.74,000 ನಗದು ಹಣವನ್ನು ಕುಳಗೇರಿ ಕ್ರಾಸ್ ಚೆಕ್‌ಪೋಸ್ಟನಲ್ಲಿ ತಪಾಸನೆ ವೇಳೆ ವಶಕ್ಕೆ ಪಡೆಯಲಾಗಿದೆ.



ಬಾದಾಮಿ ಮತಕ್ಷೇತ್ರ ವ್ಯಾಪ್ತಿಯ ಕುಳಗೇರಿ ಕ್ರಾಸ್ ಚೆಕ್‌ಪೋಸ್ಟನಲ್ಲಿ ರಾಮದುರ್ಗದಿಂದ ಕೆರೂರಗೆ ಹೊರಟ ಕಾರನ್ನು ಪರಿಶೀಲಿಸಿದಾಗ ಸಂಶಯಾತ್ಮಕವಾಗಿ ಕಂಡುಬಂದ 2.74 ಲಕ್ಷ ರೂ.ಗಳ ಹಣವನ್ನು ವಶಕ್ಕ ಪಡೆಯಲಾಗಿದೆ ಎಂದು ಬಾದಾಮಿ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ದುರುಗೇಶ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀತಿ ಸಂಹಿತೆ ಉಲ್ಲಂಘನೆ 17.28 ಲೀ ಮದ್ಯ ವಶ

**ಬಾಗಲಕೋಟೆ :** ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಬಾದಾಮಿ ಮತಕ್ಷೇತ್ರ ವ್ಯಾಪ್ತಿಯ ಕುಳಗೇರಿ ರಸ್ತೆಯಲ್ಲಿ ದಾಳಿ ನಡೆಸಿದಾಗ 17.28 ಲೀಟರ್ ಮದ್ಯವನ್ನು ಅಬಕಾರಿ ಇಲಾಖೆ ವಶಕ್ಕೆ ಪಡೆದುಕೊಂಡಿದೆ.

ದಾಳಿಯಲ್ಲಿ 96*90 ಮಿಲಿಯ ವಿಸ್ಕಿ ಟೆಟ್ರಾಪ್ಯಾಕ್ ಮತ್ತು 48*1800 ಮಿಲಿ ಹೇವಡ್ಸ್ ವಿಸ್ಕಿ ಟೆಟ್ರಾಪ್ಯಾಕ್‌ಗಳನ್ನು ದ್ವಿಚಕ್ರ ವಾಹನದಲ್ಲಿ ಸಾಗಿಸುತ್ತಿದ್ದಾಗ ಜಪ್ತ ಮಾಡಿ ವಶಪಡಿಸಿಕೊಳ್ಳಲಾಗಿದೆ. ವಶಪಡಿಸಿಕೊಂಡ ಮೌಲ್ಯ 1.07 ಲಕ್ಷ ರೂ.ಗಳದ್ದಾಗಿದೆ ಎಂದು ಅಬಕಾರಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.



# ಜಿಲ್ಲೆಯಲ್ಲಿ ಕಾಲುಬಾಯಿ ರೋಗ ಲಸಿಕಾ ಅಭಿಯಾನ

## ಜಾನುವಾರುಗಳಿಗೆ ಲಸಿಕೆ ಕಡ್ಡಾಯ: ಲಸಿಕಾ ಅಭಿಯಾನ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ನಿತೇಶ ಪಾಟೀಲ

**ಬೆಳಗಾವಿ :** ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 05ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮವು ಜಿಲ್ಲೆಯಲ್ಲಿ ಏಪ್ರಿಲ್ 01 ರಿಂದ ಏಪ್ರಿಲ್ 30 ವರೆಗೆ ಹಮ್ಮಿಕೊಳ್ಳಲಾಗಿದ್ದು, ಬ್ಯಾನರ್, ಪೋಸ್ಟರ್ ಮತ್ತು ಕರಪತ್ರಗಳನ್ನು ಮೂಲಕ ವ್ಯಾಪಕ ಪ್ರಚಾರ ಕೈಗೊಂಡು ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ ನಡೆದ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯ 05ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮ ಅಭಿಯಾನದ ಕುರಿತು ಅವರು ಮಾತನಾಡಿದರು.

ಜಾನುವಾರು ಮಾಲೀಕರ ಮನೆ ಬಾಗಿಲಿಗೆ ತೆರಳಿ ಹಸು, ಎತ್ತು, ಎಮ್ಮೆ ಮತ್ತು ಕರುಗಳಿಗೆ ಉಚಿತವಾಗಿ ಲಸಿಕೆದಾರರು ಕಾಲು ಬಾಯಿಬೇನೆ ಲಸಿಕೆಯನ್ನು ಹಾಕುವ ಗುರಿ ಹೊಂದಲಾಗಿದೆ. ಅದರಂತೆ ಅಧಿಕಾರಿಗಳು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರು ತಿಳಿಸಿದರು.

ಜಿಲ್ಲೆಯಲ್ಲಿ 20ನೇ ಜಾನುವಾರು ಗಣತಿಯ ಪ್ರಕಾರ ಒಟ್ಟು 13,93,711 ಜಾನುವಾರುಗಳಿವೆ ಆದರೆ ವಾಸ್ತವದಲ್ಲಿ ಜಾನುವಾರು ಸಂ-ಖ್ಯೆ ಕಡಿಮೆ ಇರುತ್ತವೆ ಎಂದು ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪ ನಿರ್ದೇಶಕ ಡಾ. ರಾಜೀವ ಕೂಲೇರ ಅವರು ತಿಳಿಸಿದರು.

**ಲಸಿಕೆ ಸರಬರಾಜು ಮತ್ತು ಲಸಿಕೆಯನ್ನು ಶೇಖರಣೆ ಮಾಡಲು ಶೀಥಲಿಕರಣ ವ್ಯವಸ್ಥೆ:**

ಜಿಲ್ಲೆಗೆ ಕೇಂದ್ರ ಕಚೇರಿಯಿಂದ 11,20,000 ಡೋಸ್ ಗಳಷ್ಟು ಕಾಲುಬಾಯಿ ಬೇನೆ ಲಸಿಕೆ-ಯು ಸರಬರಾಜು ಆಗಿದೆ. 04ನೇ ಸುತ್ತಿನ ಕಾಲು ಬಾಯಿ ಬೇನೆ ಲಸಿಕಾ ಕಾರ್ಯಕ್ರಮದ ಅಂತ್ಯಕ್ಕೆ ಜಿಲ್ಲೆಯಲ್ಲಿ ಒಟ್ಟು 1,65,000 ಡೋಜ್ ಲಸಿಕೆಯು ಬಾಕಿ ಉಳಿದಿರುವ ಪ್ರಯುಕ್ತ ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 12,85,000 ಡೋಸ್ ಗಳಷ್ಟು ಕಾಲುಬಾಯಿ ಬೇನೆ ಲಸಿಕೆ-ಯು ಲಭ್ಯವಿರುತ್ತದೆ.

ಸದರಿ ಲಸಿಕೆಯನ್ನು ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಲಭ್ಯವಿರುವ ವಾಕ್-ಇನ್ ಕೂಲರ್ ಶೀಥಲಿಕರಣ ಸುವ್ಯವಸ್ಥೆಯನ್ನು ಹೊಂದಿರುವ ತಾಲೂಕುಗಳಿಗೆ ಶೀಥಲಿಕರಣ ವ್ಯವಸ್ಥೆಯುಳ್ಳ 06 ವಾಹನಗಳಲ್ಲಿ ಸರಬರಾಜು ಮಾಡಿ, ಲಸಿಕೆಯನ್ನು ಸುವ್ಯವಸ್ಥಿತವಾಗಿ ಶೀಥಲಿಕರಣ ಶೇಖರಣೆ ಮಾಡಲು ಸೂಚಿಸಲಾಗಿದೆ ಎಂದು ತಿಳಿಸಿದರು.



ಕಾಲು ಬಾಯಿ ಬೇನೆ ಲಸಿಕೆ ಕಾರ್ಯಕ್ರಮ ಜರಗುವ ಸಂಧರ್ಭದಲ್ಲಿ ಲಸಿಕೆಯನ್ನು ಸುವ್ಯವಸ್ಥಿತವಾಗಿ ಶೀಥಲಿಕರಣ ವ್ಯವಸ್ಥೆಯಲ್ಲಿ ಶೇಖರಣೆ ಮಾಡಲು ಜಿಲ್ಲೆಯ ಅಥಣಿ, ಬೆಳಗಾವಿ, ಚಿಕ್ಕೋಡಿ, ಗೋಕಾಕ, ಹುಕ್ಕೇರಿ, ಕಾಗವಾಡ, ಖಾನಾಪೂರ, ಕಿತ್ತೂರು, ಮೂಡಲಗಿ, ನಿಪ್ಪಾಣಿ, ರಾಮದುರ್ಗ, ಬೈಲಹೊಂಗಲ, ಸವದತ್ತಿ, ಯರಗಟ್ಟಿ ರಾಯಬಾಗ ತಾಲೂಕುಗಳಲ್ಲಿ ಲಸಿಕೆಯನ್ನು ತಾಲೂಕಿನ ಅಧಿನದಲ್ಲಿ ಬರುವ ಎಲ್ಲ ಪಶುಸಂಸ್ಥೆಗಳಿಗೆ ಸರಬರಾಜು ಮಾಡಲಾಗುವುದು. ಲಸಿಕೆದಾರರು ವಿವಿಧ ವಾರ್ಡ/ಗ್ರಾಮಗಳಲ್ಲಿರುವ ಜಾನುವಾರು ಮಾಲೀಕರ ಮನೆ ಬಾಗಿಲಿಗೆ ಹೋಗಿ ಅರ್ಹ ಜಾನುವಾರುಗಳಿಗೆ ಲಸಿಕೆಯನ್ನು ಮಾಡಲು 847 Vaccine Carriers ಗಳು ಲಭ್ಯವಿದ್ದು, ಇದರಿಂದ ಲಸಿಕೆಯ ಗುಣ ಮಟ್ಟವನ್ನು ಹಾಳಾದಂತೆ ಕಾಪಾಡಿಕೊಳ್ಳಲಾಗುತ್ತದೆ ಎಂದು ವಿವರಿಸಿದರು.

**ಲಸಿಕೆದಾರರ ವಿವರ:**

ಜಿಲ್ಲೆಯಲ್ಲಿ ಒಟ್ಟು 15 ತಾಲೂಕುಗಳಲ್ಲಿ 913 ಲಸಿಕೆದಾರರನ್ನೊಳಗೊಂಡ 457 ಲಸಿಕಾ ತಂಡಗಳನ್ನು ರಚಿಸಿ, ಜಿಲ್ಲೆಯಲ್ಲಿ ಲಭ್ಯವಿರುವ ಎಲ್ಲ ಅರ್ಹ ದನ ಮತ್ತು ಎಮ್ಮೆಗಳಿಗೆ ಲಸಿಕೆ ಹಾಕಲಾಗುವುದು.

ಪ್ರತಿ ದಿನ ಅರ್ಹ ಜಾನುವಾರುಗಳಿಗೆ ಕಾಲು ಬಾಯಿ ಬೇನೆ ಲಸಿಕೆಯನ್ನು ಜಾನುವಾರುಗಳಿಗೆ ನೀಡಿದ ಮಾಹಿತಿಯನ್ನು ಭಾರತ ಪಶುಧನ ತಂತ್ರಾಂಶದಲ್ಲಿ ಇಂಧೀಕರಿಸಲು ಪ್ರತಿಯೊಬ್ಬ ಲಸಿಕೆದಾರರಿಗೆ ಪ್ರತ್ಯೇಕ ಯೂಜರ್-ಐಡಿಯನ್ನು ಈಗಾಗಲೇ ನೀಡಲಾಗಿದೆ. ಆ ಯೂಜರ್ ಐಡಿಗಳಿಗೆ ಜಾನುವಾರುಗಳಿಗೆ ಲಸಿಕೆಯನ್ನು ಹಾಕುವ ಗ್ರಾಮ/ವಾರ್ಡಗಳನ್ನು ಮ್ಯಾಪಿಂಗ್ ಮಾಡಿ ಲಸಿಕೆದಾರರಿಗೆ ನೀಡಲಾಗಿರುತ್ತದೆ.

ಲಸಿಕೆದಾರರು ಜಾನುವಾರುವಿಗೆ ಲಸಿಕೆಯನ್ನು ಹಾಕಿ, ಸದರಿ ಪ್ರಗತಿಯ ವರದಿಯನ್ನು ಭಾರತ ಪಶುಧನ ತಂತ್ರಾಂಶದಲ್ಲಿ ಮಾಹಿತಿಯನ್ನು ನಮೂದಿಸಲು ತಿಳಿಸಲಾಗಿದೆ.

ಇಲಾಖೆಯ ವೆಬ್‌ಸೈಟ್ AHVS KDP-MIS ತಂತ್ರಾಂಶದಲ್ಲಿ ಲಸಿಕೆ ಹಾಕಲಾದ ಗ್ರಾಮವಾರು, ಜಾನುವಾರು ಮಾಲೀಕರ ವರ್ಗವಾರು ಪ್ರತಿ ದಿನ ನಿಗದಿತ ಸಮಯದೊಳಗೆ ಕ್ರೋಢೀಕೃತ ಮಾಹಿತಿಯನ್ನು ದಾಖಲಿಸಲಾಗುವುದು ಎಂದು ಡಾ.ರಾಜೀವ್ ಕೂಲೇರ್ ತಿಳಿಸಿದರು.

**ಪಶು ಸಖಿಯರು ಕಾರ್ಯನಿರ್ವಹಣೆ:**

ಪಶು ಸಖಿಯರು ಇಲಾಖೆ ಹಾಗೂ ರೈತರ ಸಂಪರ್ಕ ಕೊಂಡಿಯಂತೆ ಕಾರ್ಯನಿರ್ವಹಿಸುತ್ತಿದ್ದಾರೆ, ಈಗಾಗಲೇ ಪಶು ಸಖಿಯರು ಕಂದು ರೋಗ ಲಸಿಕಾ ಕಾರ್ಯಕ್ರಮ ಅನುಷ್ಠಾನದ ಪೂರ್ವದಲ್ಲಿ 4 ರಿಂದ 8 ತಿಂಗಳ ಹೆಣ್ಣು ಕರುಗಳ ಗಣತಿಯನ್ನು ಮಾಡಿ ಪಶು ಸಂಸ್ಥೆಗಳಿಗೆ ನಿಡಿರುತ್ತಾರೆ, ಅದರಂತೆ ಮಾರ್ಚ್ 16, 2024 ರಿಂದ ಮಾರ್ಚ್ 30, 2024 ರವರೆಗೆ ಕಂದು ರೋಗ ಲಸಿಕಾ ಕಾರ್ಯಕ್ರಮವನ್ನು ಲಸಿಕೆದಾದರರು ಜಾನುವಾರು ಮಾಲೀಕರ ಮನೆ ಬಾಗಿಲಿಗೆ ಹೋಗಿ ಅರ್ಹ ಹೆಣ್ಣು ಜಾನುವಾರುಗಳಿಗೆ ಕಂದು ರೋಗ ಲಸಿಕೆಯನ್ನು ಉಚಿತವಾಗಿ ಹಾಕಲು ತಿಳಿಸಲಾಗಿದೆ.

ಇದಲ್ಲದೇ ಇಲಾಖೆಯ ವಿವಿಧ ಲಸಿಕಾ ಕಾರ್ಯಕ್ರಮಗಳ ಕುರಿತು ರೈತರ ಮನೆ ಬಾಗಿಲಿಗೆ ಪಶು ಸಖಿಯರು ಹೋಗಿ ರೈತರಿಗೆ ಅರಿವು ಮೂಡಿಸುತ್ತಿದ್ದಾರೆ ಎಂದು ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪ ನಿರ್ದೇಶಕ ಡಾ. ರಾಜೀವ ಕೂಲೇರ ಹೇಳಿದರು.

5ನೇ ಸುತ್ತಿನ ಲಸಿಕಾ ಕಾರ್ಯಕ್ರಮವನ್ನು ಮಾರ್ಗಸೂಚಿಗಳನ್ವಯ ಜಿಲ್ಲೆಯ ಎಲ್ಲ ಗ್ರಾಮ/ವಾರ್ಡಗಳಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿ, ಕಾಲು ಬಾಯಿ ಬೇನೆ ರೋಗದಿಂದ ಜಾನುವಾರುಗಳನ್ನು ರಕ್ಷಿಸಿ, ಗೋ ಸಂಪತ್ತಿನ ಆರೋಗ್ಯವನ್ನು ಕಾಪಾಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

**ಪೋಸ್ಟರ್ ಬಿಡುಗಡೆ:**

ಇದಕ್ಕೂ ಮುಂಚೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭಿಮಾಶಂಕರ ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಅವರು ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿಯ 05ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮ ಅಭಿಯಾನದ ಪೋಸ್ಟರ್ ಬಿಡುಗಡೆ ಮಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭಿಮಾಶಂಕರ ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಆಯುಕ್ತ ಲೋಕೇಶ, ಜಿ.ಪಂ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಟರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಶಿವನಗೌಡ ಪಾಟೀಲ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಮಾತು ಆರಂಭಿಸಿದ 'ಸಿಂಹರೂಪಿಣಿ'

**ಬೆಂಗಳೂರು :** ಶ್ರೀ ಚಕ್ರ ಫಿಲಂಸ್ ಲಾಂಛನದಲ್ಲಿ ಭಕ್ತಿ ಪ್ರಧಾನ ಚಲನಚಿತ್ರ 'ಸಿಂಹರೂಪಿಣಿ' ಅದ್ದೂರಿ ಗ್ರಾಫಿಕ್ಸ್‌ನೊಂದಿಗೆ ತೆರೆಗೆ ಬರಲು ಸದ್ದಿಲ್ಲದೆ ಸಿದ್ಧವಾಗುತ್ತಿದೆ.

ಈಗಾಗಲೇ ಸಂಪೂರ್ಣ ಚಿತ್ರೀಕರಣ ಮುಗಿಸಿರುವ ಚಿತ್ರ ತಂಡ. ಈಗ ಮಾತಿನ ಮರುಲೇಪನ ಕಾರ್ಯವನ್ನು ಲೂಪ್ ಸ್ಟುಡಿಯೋದಲ್ಲಿ ಆರಂಭಿಸಿದೆ. ಕೆಜಿಎಫ್. ಸಲಾರ್. ಚಿತ್ರಗಳ ಖ್ಯಾತ ಸಾಹಿತಿ ಕಿನ್ನಾಳ ರಾಜ್ ಅವರು ನಿರ್ದೇಶನ ಮಾಡುತ್ತಿದ್ದು. ಶ್ರೀ ಕೆಎಂ ನಂಜುಂಡೇಶ್ವರ ಅವರು ಕಥೆ ಬರೆದು ಚಿತ್ರ ನಿರ್ಮಾಣ ಮಾಡುತ್ತಿದ್ದಾರೆ. ಬರುವ ತಿಂಗಳು ಚಿತ್ರದ ಮೊದಲ ನೋಟ (ಫಸ್ಟ್ ಲುಕ್) ಬಿಡುಗಡೆಗೆ ಆಗಲಿದ್ದು ಇದು ಶ್ರೀ ಮಾರಮ್ಮ ದೇವಿಯ ಕುರಿತಾದ ಚಿತ್ರವಾಗಿದೆ.



ಚಿತ್ರದಲ್ಲಿ ಮಾರಮ್ಮ ದೇವಿಯಾಗಿ ಯಶಸ್ವಿನಿ ಅವರು ಕಾಣಿಸಿಕೊಂಡಿದ್ದಾರೆ. ಖ್ಯಾತ ನಿರೂಪಕಿಯಾದ ಅಂಕಿತಾ ಗೌಡ ಅವರು ನಾಯಕಿಯಾಗಿ ನಟಿಸಿದ್ದಾರೆ. ಇನ್ನುಳಿದಂತೆ ಯಶ್ ಶೆಟ್ಟಿ ,ಪುನಿತ್ ರುದ್ರನಾಗ್, ದಿವ್ಯಾ ಆಲೂರು, ತೆಲುಗಿನ ಹಿರಿಯ ನಟರಾದ ಸುಮನ್. ತಮಿಳು ನಟ ದಿನಾ, ಹರೀಶ್ ರಾಯ್, ನೀನಾಸಂ ಅಶ್ವಥ್, ತಬಲಾ ನಾಣಿ, ದಿನೇಶ್ ಮಂಗಳೂರು, ಭಜರಂಗಿ ಪ್ರಸನ್ನ, ಅವರಂತ ಪ್ಯಾನ್ ಇಂಡಿಯ ಕಲಾವಿದರ ಜೊತೆ ಸಾಗರ್, ವಿಜಯ್ ಚಂಡೂರ್, ವರ್ಧನ್ ತೀರ್ಥಹಳ್ಳಿ, ಮನಮೋಹನ ರೈ. ನವಾಜ್. ಲೋಹಿತ್. ಪಿಳ್ಳಪ್ಪ. ಉಮೇಶಣ್ಣ.ವಿಜಯ್ ಬಸ್ರೂರು, ಸುನಂದಾ ಕಲ್ಬುರ್ಗಿ, ವೇದಾ ಹಾಸನ್, ರಾಧಾ ರಾಮಚಂದ್ರ, ಗುರುಮೂರ್ತಿ, ವೈಭವ್ ನಾಗರಾಜ, ಶಶಿಕುಮಾರ, ಯುವರಾಜ್, ಅಂತಹ ಇನ್ನೂ 65ಕ್ಕೂ ಹೆಚ್ಚಿನ ಕಲಾವಿದರು ಚಿತ್ರದಲ್ಲಿ ನಟಿಸಿದ್ದಾರೆ.

ಸಂಗೀತ ಆಕಾಶ ಪರ್ವ. ಛಾಯಾಗ್ರಹಣ ಕಿರಣ್ ಕುಮಾರ್, ಸಂಕಲನ ವೆಂಕಿ ಯು ಡಿ ವಿ , ಎಕ್ಸಿಕ್ಯೂಟಿವ್ ಪ್ರೊಡ್ಯೂಸರ್ ಆಗಿ ಬಾಲಸುಬ್ರಹ್ಮಣ್ಯಂ ಅವರು ಕಾರ್ಯ ನಿರ್ವಹಿಸಿದ್ದಾರೆ. ಪತ್ರಿಕಾ ಸಂಪರ್ಕ ಆರ್ ಚಂದ್ರಶೇಖರ್. ಮತ್ತು ಡಾ.ಪ್ರಭು ಗಂಜಿಹಾಳ್. ಡಾ.ವೀರೇಶ್ ಹಂಡಿಗಿ ಅವರದ್ದಾಗಿದೆ. ರಾಜಶೇಖರ್ .ಮಲ್ಲಿಕ್. ನಿತ್ಯ ದಿನೇಶ್. ತೇಜಸ್ ನಿರ್ದೇಶನ ತಂಡದಲ್ಲಿದ್ದಾರೆ.

# ಬಿಜೆಪಿಗೆ ಮತ್ತಷ್ಟು ಬಲ ತಂದ ಕಿಂಗ ಮೇಕರ್: ಶೆಟ್ಟರಗೆ ಸತ್ಕರಿಸಿ, ಶುಭಾಶಯ ತಿಳಿಸಿದ ಸಾಹುಕಾರ್

**ಬೆಳಗಾವಿ:** ಶುಕ್ರವಾರವಾರಬೆಳಗಾವಿಯವಿಶ್ವೇಶ್ವರಯ್ಯ ನಗರದಲ್ಲಿ ಇರುವ ಮಂಗಳಾ ಸುರೇಶ್ ಅಂಗಡಿ ಅವರ ಪಕ್ಷದ ಕಚೇರಿಗೆ ಆಗಮಿಸಿದ ಮಾಜಿ ಸಚಿವರು ಹಾಗೂ ಗೋಕಾಕಿನ ಶಾಸಕರಾದ ರಮೇಶ್ ಜಾರಕಿಹೊಳಿ ಅವರು ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ ಅವರನ್ನು ಭೇಟಿಮಾಡಿದ್ದಾರೆ..

ಮಧ್ಯಾಹ್ನ ಆಗಮಿಸಿದ ಸಾಹುಕಾರರು, ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುವ ಜಗದೀಶ ಶೆಟ್ಟರ ಅವರನ್ನು ಅಭಿನಂದಿಸಿ, ಜಿಲ್ಲಾ ಬಿಜೆಪಿಯ ಎಲ್ಲಾ ನಾಯಕರೂ ತಮ್ಮ ಜೊತೆಗೆ ಇದ್ದೇವೆ ಎಂಬ ಭರವಸೆ ನೀಡಿದ್ದಾರೆ..


ಚುನಾವಣೆಯ ಪ್ರಚಾರದ ಸ್ಥಿತಿಗತಿಗಳ ಬಗ್ಗೆ ಚರ್ಚೆ ಮಾಡಿದ ಶಾಸಕರು, ಬರುವ ದಿನಗಳಲ್ಲಿ ಯಾವ ರೀತಿಯಲ್ಲಿ ಪ್ರಚಾರ ಮಾಡಿ, ಜನಬಲ ಪಡೆದು, ಈ ಚುನಾವಣೆಯಲ್ಲಿ ವಿಜಯಿಯಾಗಬೇಕೆಂಬ ವಿಚಾರ ವಿನಿಮಯಗಳುನಡೆದಿರಬಹುದೆಂಬಮಾಹಿತಿಇದೆ..

ಒಟ್ಟಿನಲ್ಲಿ ಸಾಹುಕಾರರ ಸಾಥ್ ಸಿಕ್ಕಿರುವ ಶೆಟ್ಟರ್ ಅವರ ಆತ್ಮವಿಶ್ವಾಸ ಇಮ್ಮಡಿಯಾಗಿದ್ದು, ಪೂರ್ಣ ಪ್ರಮಾಣದ ಪ್ರಚಾರದಲ್ಲಿ ರಮೇಶ್ ಜಾರಕಿಹೊಳಿ ಅವರು ಇಳಿದರೆ, ಬಿಜೆಪಿಯಬಾವುಟಮತ್ತಷ್ಟುಮೇಲೆರಾರಾಜಿಸುತ್ತದೆ..

ಈ ಭೇಟಿಯ ಸಂದರ್ಭದಲ್ಲಿ ಬಿಜೆಪಿ ಬೆಳಗಾವಿ ಗ್ರಾಮೀಣ ಅಧ್ಯಕ್ಷರಾದ ಸುಭಾಸ ಪಾಟೀಲ, ಬಿಜೆಪಿ ಮುಖಂಡರಾದ ಕಿರಣ ಜಾಧವ, ಮುರುಗೇಂದ್ರಗೌಡ ಪಾಟೀಲ, ಮತ್ತಿತರ ಬಿಜೆಪಿ ಪ್ರಮುಖರು ಹಾಗೂ ಕಾರ್ಯಕರ್ತರುಉಪಸ್ಥಿತರಿದ್ದರು..

**ವರದಿಗಾರನಂದೀಶಮೆಣಸಿನಕಾಯಿಬೆಳಗಾವಿಜಿಲ್ಲೆ**

# ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಿಂದ ಚೆಕ್‌ಪೋಸ್ಟ್ ಗಳಿಗೆ ಭೇಟಿ, ಖುದ್ದು ವಾಹನಗಳ ಪರಿಶೀಲನೆ



**ಕೊಪ್ಪಳ :** ಲೋಕಸಭಾ ಚುನಾವಣೆ 2024 ರ ನಿಮಿತ್ತ ಜಿಲ್ಲೆಯ ವಿವಿಧೆಡೆ ತೆರೆದಿರುವ ವಿವಿಧ ಚೆಕ್‌ಪೋಸ್ಟ್‌ಗಳಿಗೆ ಮಾರ್ಚ್ 28 ರ ರಾತ್ರಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ರಾತ್ರಿ 10:30 ಕ್ಕೆ ಕೊಪ್ಪಳ ತಾಲ್ಲೂಕು ದದೇಗಲ್ ಚೆಕ್‌ಪೋಸ್ಟ್, 11:20 ಕ್ಕೆ ಬನ್ನಿಕೊಪ್ಪ ಚೆಕ್‌ಪೋಸ್ಟ್, 1 ಗಂಟೆಗೆ ಯಲಬುರ್ಗಾ ತಾಲೂಕು ಸಂಕನೂರ್ ಹಾಗೂ 1:30 ಕ್ಕೆ ಬಂಡಿ ಕ್ರಾಸ್ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ, ತಾವೇ ಖುದ್ದಾಗಿ ವಾಹನಗಳ ಪರಿಶೀಲನೆ ನಡೆಸಿದರು.

ಚೆಕ್‌ಪೋಸ್ಟ್ ಸಿಬ್ಬಂದಿಗಳು ನಿಯಮಾನುಸಾರ ವಾಹನಗಳ ತಪಾಸಣೆ ನಡೆಸುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಚೆಕ್‌ಪೋಸ್ಟ್‌ಗಳಲ್ಲಿ ಸಿಬ್ಬಂದಿಗಳ ಹಾಜರಾತಿ ಪರಿಶೀಲನೆ ನಡೆಸಿ,

ಚೆಕ್‌ಪೋಸ್ಟ್ ಗಳಲ್ಲಿ ಕಲ್ಪಿಸಿರುವ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿದರು.

# ಮಾತೋಶ್ರೀ ಶಕುಂತಲಾಬಾಯಿ ಬೆಳ್ಳಿ ಪಬ್ಲಿಕ್ ಶಾಲೆಯ ಮಕ್ಕಳ ಸಾಧನೆ



ವಿಜಯಪುರ;ಜಿಲ್ಲೆಯನಿಡಗುಂದಿ ತಾಲೂಕಿನ ಮುಕಾರ್ತಿಹಾಳ ಗ್ರಾಮದ ಮಾತೋಶ್ರೀ ಶಕುಂತಲಾಬಾಯಿ ಬೆಳ್ಳಿ ಪಬ್ಲಿಕ್ ಶಾಲೆಯ ಮಕ್ಕಳು ವಾರ್ಷಿಕ ಪರೀಕ್ಷೆಯಲ್ಲಿ ಅಧಿಕ ಅಂಕ ಮ ಗಳಿಸಿ ಗಣನೀಯ ಸಾಧನೆ ಮಾಡಿದ್ದಾರೆ. ಶಾಲೆಯ ಮಕ್ಕಳಾದ ಅಪೂರ್ವಾ ಬಿರಾದಾರ(ಎಲ್. ಕೆ.ಜಿ) ಶೇ.97.05, ಆರಾಧ್ಯಾ ಹಡಲಗೇರಿ(ಯು.ಕೆ.ಜಿ) ಶೇ.98, ಮಹಾಂತಗೌಡ ಬಿರಾದಾರ (1ನೇ ತರಗತಿ) ಶೇ.95.05, ಹರ್ಷಾ ಬಿರಾದಾರ (2ನೇ ತರಗತಿ) ಶೇ.97, ತೃಪ್ತಿ ಮಹಮದ್ಕೋಟಿ (3ನೇ ತರಗತಿ) ಶೇ,95,.75, ಸುಶೀಲ ಕಲ್ಯಾಣಿ (4ನೇ ತರಗತಿ) ಶೇ.88.25 ಮತ್ತು ವಿನಾಯಕ ಲಮಾಣಿ (5ನೇ ತರಗತಿ) ಶೇ.90.75ರಷ್ಟು ಅಂಕ ಪಡೆದು ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ.

ವಿದ್ಯಾರ್ಥಿಗಳನ್ನು ಅಬಿನಂದಿಸಿ ಮಾತನಾಡಿದ ಶಾಲಾ ಅದ್ಯಕ್ಷ ಡಾ. ರವೀಂದ್ರ ಬೆಳ್ಳಿ, ಅತೀ ಕಡಿಮೆ ಅವಧಿಯಲ್ಲಿ ಶಾಲೆಯ ಮಕ್ಕಳು ಹೆಚ್ಚಿನ ಸಾಧನೆ ಮಾಡಿದ್ದು, ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಇನ್ನೂ ಮಕ್ಕಳಿಗೆ ಹೆಚ್ಚಿನ ಸೌಲಭ್ಯ ಕಲ್ಪಿಸಿ ಮಕ್ಕಳಿಗೆ ಉನ್ನತ ಗುರಿ ಮುಟ್ಟಲು ಅನುಕೂಲ ಕಲ್ಪಿಸಲಾಗುವದೆಂದರು. ಪಾಲಕರು ಮಕ್ಕಳಿಗಾಗಿ ಆಸ್ತಿಯನ್ನು ಮಾಡದೇ ಮಕ್ಕಳನ್ನೆ ಆಸ್ತಿಯನ್ನಾಗಿ ಮಾಡಬೇಕು. ಮಕ್ಕಳಿಗೆ ಮೊಬೈಲ್ನಿಂದ ದೂರವಿಡಬೇಕು ಎಂದರು.

ಈ ಸಂದರ್ಭದಲ್ಲಿ ಶಾಲಾ ಆಡಳಿತ ಮಂಡಳಿಯ ಪದಾಧಿಕಾ-ರಿಗಳಾದ ಕೆ. ಎಲ್. ದಶವಂತ, ವಿಜಯಕುಮಾರ ಸಿ, ಮುಖ್ಯ ಗುರುಮಾತೆ ನಿವೇದಿತಾ ರೂಡಗಿ, ಶಿಕ್ಷಕಿಯರಾದ ರೇಣುಕಾ ಗುಣಕಿ, ಚೈತ್ರಾ ಗುಳೇದಗುಡ್ಡ, ಕೀರ್ತಿ ಚಿಮ್ಮಲಗಿ, ರೂಪಾ ಪಟ್ಟಣಶೆಟ್ಟಿ, ಕಾಶಿಬಾಯಿ, ಮಹಾದೇವ ಮೇಟಿ ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಹಾಗೂ ಪಾಲಕರು ಉಪಸ್ಥಿತ-ರಿದ್ದರು.

# ಜಿಲ್ಲಾ ಕ್ರೀಡಾಂಗಣದಲ್ಲಿನ ಈಜುಕೊಳ ಸದ್ಬಳಕೆಗೆ ಮನವಿ



**ಕೊಪ್ಪಳ :** ಕೊಪ್ಪಳ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿರುವ ಏಕೈಕ ಸುಸಜ್ಜಿತವಾದ ಈಜುಕೊಳವು ಕಾರ್ಯಾರಂಭವಾಗಿದ್ದು, ಈಜುಕೊಳವು ಇಬ್ಬರು ತರಬೇತುದಾರರು, ಇಬ್ಬರು ಲೈಫ್ ಗಾರ್ಡ್ ಹಾಗೂ ಈಜುಕೊಳಕ್ಕೆ ಬರುವಂತಹ ಸಾರ್ವಜನಿಕರಿಗೆ ಸುಸಜ್ಜಿತ ಡ್ರೆಸಿಂಗ್ ರೂಮ್, ಶೌಚಾಲಯಗಳ ಕೊಠಡಿ ಮತ್ತು ಕುಡಿಯುವ ನೀರಿನ ಸೌಲಭ್ಯವನ್ನು ಹೊಂದಿದೆ. ಪ್ರತಿ 03 ತಿಂಗಳಿಗೊಮ್ಮೆ ಸಂಪೂರ್ಣವಾಗಿ ನೀರನ್ನು ತೆಗೆದು ಹೊಸ ನೀರನ್ನು ಬಳಕೆ ಮಾಡಲಾಗುತ್ತಿದ್ದು, ಈಜುಕೊಳದ ನೀರನ್ನು ಪ್ರತಿದಿನ ಫಿಲ್ಟ್ರೇಶನ್ ಮಾಡಿ ನೀರು ಶುದ್ಧೀಕರಿಸಲಾಗುತ್ತಿದೆ. ಸಾರ್ವಜನಿಕರು ಈಗಾಗಲೇ ಇದರ ಸದುಪಯೋಗ ಪಡೆದುಕೊಳ್ಳುತ್ತಿದ್ದು, ಸಾರ್ವಜನಿಕರಿಗೆ ಈಜುಕೊಳ ತರಬೇತುದಾರರಿಂದ ತರಬೇತಿ ನೀಡಲಾಗುವುದು.

ಈಜುಕೊಳಕ್ಕೆ ಪ್ರತಿದಿನ ಬೆಳಗ್ಗೆ 06 ರಿಂದ ಸಂಜೆ 4.30 ರವರೆಗೆ ಸಾರ್ವಜನಿಕರಿಗೆ ಹಾಗೂ ಸಂಜೆ 5 ರಿಂದ 6 ರವರೆಗೆ ಮಹಿಳೆಯರಿಗೆ ಅವಕಾಶ ಕಲ್ಪಿಸಲಾಗಿದೆ. ಈಜುಕೊಳ ಸದಸ್ಯತ್ವಕ್ಕೆ ಶುಲ್ಕವನ್ನು ನಿಗದಿಪಡಿಸಲಾಗಿದ್ದು, ಆಜೀವ ಸದಸ್ಯತ್ವಕ್ಕೆ ರೂ.2000/, ಮಾಸಿಕ ರೂ.1500/-, 12 ವರ್ಷದೊಳಗಿನವರಿಗೆ ರೂ.2000/-, ಮಾಸಿಕ ರೂ.750/-, ಸಾರ್ವಜನಿಕರಿಗೆ ಪ್ರತಿ ಒಂದು ತಾಸಿಗೆ ರೂ.100/-ಗಳ ಶುಲ್ಕವನ್ನು ನಿಗದಿಪಡಿಸಿದೆ. ಸಾರ್ವಜನಿಕರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಸರಳ್ಳಿ: ಕುಡಿಯುವ ನೀರಿನ ಸಮಸ್ಯೆ ಪರಿಹಾರ




**ಕೊಪ್ಪಳ :** ಕೊಪ್ಪಳ ತಾಲೂಕಿನ ಬಿಸರಳ್ಳಿ ಗ್ರಾಮದಲ್ಲಿ ಉಂಟಾಗಿದ್ದ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲಾಗಿದೆ ಎಂದು ಕೊಪ್ಪಳ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ತಿಳಿಸಿದ್ದಾರೆ.

ಬಿಸರಳ್ಳಿ ಗ್ರಾಮದಲ್ಲಿ 4,120 ಜನಸಂಖ್ಯೆ ಇದ್ದು, 05 ಕುಡಿಯುವ ನೀರಿನ ಬೋರ್‌ವೆಲ್ ಇರುತ್ತವೆ. ಬೋರ್‌ವೆಲ್‌ಗಳಿಂದ ಸರಬರಾಜು ಆಗುತ್ತಿರುವ ಕುಡಿಯುವ ನೀರು ಬಹಳಷ್ಟು ಗಡಸುತನ ಇರುವುರಿಂದ ಕುಡಿಯಲು ಯೋಗ್ಯವಾಗಿರುವುದಿಲ್ಲ. ಬಿಸರಳ್ಳಿ ಗ್ರಾಮಕ್ಕೆ ಸಿಹಿ ನೀರು ಸರಬರಾಜು ಮಾಡಲು ಬೇಳೂರು ಗ್ರಾಮದ ಹತ್ತಿರ ಇರುವ ತುಂಗಭದ್ರಾ ಹಿನ್ನೀರಿನ ವ್ಯಾಪ್ತಿಯಲ್ಲಿ 05 ಕುಡಿಯುವ ನೀರಿನ ಬೋರ್‌ವೆಲ್‌ಗಳಿದ್ದು, ಅಲ್ಲಿನ ಪಂಪ್‌ಹೌಸ್ ಮೂಲಕ ಬಿಸರಳ್ಳಿ ಗ್ರಾಮಕ್ಕೆ ಸಿಹಿ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಕಳೆದ 04 ದಿನಗಳಿಂದ ಬೇಳೂರು ಗ್ರಾಮದ ಹತ್ತಿರ ಇರುವ ತುಂಗಭದ್ರಾ ಹಿನ್ನೀರಿನ ವ್ಯಾಪ್ತಿಯಲ್ಲಿನ ಪಂಪ್‌ಹೌಸ್‌ನಲ್ಲಿ ಪಂಪ್‌ಹೌಸ್ ಬೋರ್‌ವೆಲ್ ಮೋಟಾರ್‌ಗಳು ಸುಟ್ಟಿದ್ದರಿಂದ ಬಿಸರಳ್ಳಿ ಗ್ರಾಮಕ್ಕೆ ಕುಡಿಯುವ ನೀರು ಸರಬರಾಜು ಮಾಡುವಲ್ಲಿ ಅಡಚಣೆಯಾಗಿತ್ತು. ಈ ಸಂದರ್ಭದಲ್ಲಿ ಬಿಸರಳ್ಳಿ ಗ್ರಾಮದಲ್ಲಿರುವ 05 ಬೋರ್‌ವೆಲ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗಿರುತ್ತದೆ.

ಮಾ.28 ರಂದು ಬೇಳೂರು ಗ್ರಾಮದ ಹತ್ತಿರ ಇರುವ ತುಂಗಭದ್ರಾ ಹಿನ್ನೀರಿನ ವ್ಯಾಪ್ತಿಯಲ್ಲಿನ ಪಂಪ್‌ಹೌಸ್ ನಲ್ಲಿ ಪಂಪ್‌ಹೌಸ್ ಬೋರ್‌ವೆಲ್‌ಗಳಿಗೆ ಹೊಸ ಮೋಟಾರ್ ಗಳನ್ನು ಅಳವಡಿಸಿ ಸಣ್ಣ-ಪುಟ್ಟ ದುರಸ್ಥಿ ಕೈಗೊಂಡು ಬಿಸರಳ್ಳಿ ಗ್ರಾಮಕ್ಕೆ ಕುಡಿಯಲು ಸಿಹಿ ನೀರು ಸರಬರಾಜು ಮಾಡಲಾಗುತ್ತಿದೆ. ಗ್ರಾಮದಲ್ಲಿ ಕುಡಿಯುವ ನೀರು ಸಮಸ್ಯೆಯಾಗದಂತೆ ಗ್ರಾಮ ಪಂಚಾಯತಿ ವತಿಯಿಂದ ಎಲ್ಲಾ ಕ್ರಮ ವಹಿಸಲಾಗಿರುತ್ತದೆ ಎಂದು ತಾ.ಪಂ. ಇಒ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಧ್ಯಯನಕ್ಕಾಗಿ ಯೋಗ

ವಿಜಯಪುರ,: ನಗರದ ನವಭಾರತ ಫೌಂಡೇಶನ್ ವತಿಯಿಂದ ಸ್ಥಳೀಯ ಶ್ರೀ ಸಿದ್ಧಲಿಂಗೇಶ್ವರ ಗ್ರಂಥಾಲಯದಲ್ಲಿ ವಿದ್ಯಾರ್ಥಿಗಳಿಗೆ "ಅಧ್ಯಯನಕ್ಕಾಗಿ ಯೋಗ" ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಯೋಗ ಶಿಕ್ಷಕರಾದ ಎಮ್.ಪಿ. ದೊಡಮನಿ ಅವರು ಮಾತನಾಡಿ, ಪ್ರಸ್ತುತ ಪರಿಸ್ಥಿತಿಯಲ್ಲಿ ಯುವಕರು ಯೋಗದ ಮಹತ್ವ, ಅಧ್ಯಯನಶೀಲತೆ ಹಾಗೂ ವ್ಯಕ್ತಿತ್ವ ರೂಪಿಸಿಕೊಳ್ಳಲು ಸಲಹೆ ನೀಡಿದರು. 100 ಕ್ಕೂ ಹೆಚ್ಚು ಯುವ ವಿದ್ಯಾರ್ಥಿಗಳುಪಾಲ್ಗೊಂಡಿದ್ದರು, ನವಭಾರತ ಫೌಂಡೇಶನ್ ಕಾರ್ಯಾಧ್ಯಕ್ಷ ರಾಜಶೇಖರ ಜಂಬಗಿ ಅವರು ಕಾರ್ಯಕ್ರವನ್ನು



ಉದ್ಘಾಟಿಸಿದರು.

ಇದೇಸಂದರ್ಭದಲ್ಲಿಗ್ರಂಥಾಲಯ ಸಂಸ್ಥಾಪಕ ಶ್ರೀ ರೇವಣಸಿದ್ಧ ಬ್ಯಾಳಿ ಅವರಿಗೆನವಭಾರತ ಫೌಂಡೇಶನ್ ವತಿಯಿಂದ "ಯೋಗ ಪೊ?ಷಣಾ ಮಿತ್ರ" ಪ್ರಶಸ್ತಿ ನೀಡಿ ಗೌರವಿಸಲಾಯಿತು, ಬಸವರಾಜ ಹಡಪದ, ವೀರೇಶ ಸಿ ಬಿರಾದಾರ , ಪ್ರಶಾಂತ ವರ್ಧನ, ಶ್ರೀಕಾಂತ ಮಂಗಾನವರ ಅತಿಥಿಗಳಾಗಿ ಭಾಗವಹಿಸಿದ್ದರು.

ಮಲ್ಲಿಕಾರ್ಜುನ ದಳವಾಯಿ ಸ್ವಾಗತಿಸಿದರು. ರಾಕೇಶ ಚವ್ಹಾಣ ವಂದಿಸಿದರು.



ಹೆಬ್ಬಳ್ಳಿ ಗ್ರಾಮದ ವಿವಿಧ ವಾರ್ಡಗಳಲ್ಲಿ ಮಹಿಳಾ ಮತದಾರರಿಗೆ ಕುಂಕುಮ ಹಚ್ಚಿ ಮತದಾನದ ಮಹತ್ವ ತಿಳಿಸಿ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮತದಾನ ದಿನವಾದ ಮೇ 07 ರಂದು ಮತದಾನ ಮಾಡುವಂತೆ ಗ್ರಾಮದಲ್ಲಿ ಜಾಗೃತಿ ಮೂಡಿಸಲಾಯಿತು.

# ಗುಲಗಂಜಿಕೊಪ್ಪದಲ್ಲಿ ಮತದಾನ ಜಾಗೃತಿ

**ಧಾರವಾಡ :** ಕಳೆದ 2019 ರ ಲೋಕಸಭಾ ಚುನಾವಣೆಯಲ್ಲಿ ಅತೀ ಕಡಿಮೆ ಮತದಾನವಾಗಿರುವ ಗುಲಗಂಜಿಕೊಪ್ಪದ ಎರಡು ಮತ ಕೇಂದ್ರಗಳ ವ್ಯಾಪ್ತಿಯ ಮತದಾರರಲ್ಲಿ ತಪ್ಪದೇ ಮತ ಚಲಾತಯಿಸುವಂತೆ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಸ್ವರೂಪ ಟಿ.ಕೆ ಅವರು ಕರೆ ನಿಡಿದರು.

ಭಾರತದ ಸಂವಿಧಾನವು ರಾಷ್ಟ್ರದ ನಾಗರಿಕರಿಗೆ ನೀಡಿರುವ ಅಮೂಲ್ಯವಾದ ಹಕ್ಕು ಮತದಾನವಾಗಿದೆ. ಮತ್ತು ತಪ್ಪದೇ ಮತದಾನ ಮಾಡುವುದು ಪ್ರತಿಯೊಬ್ಬ ವಯಸ್ಕ ಪ್ರಜೆಯ ಕರ್ತವ್ಯವು ಆಗಿದೆ. ಆದ್ದರಿಂದ ಅರ್ಹ ಪ್ರತಿಯೊಬ್ಬರು ಬರುವ ಮೇ



7 ರಂದು ತಪ್ಪದೇ ಮತದಾನ ಮಾಡುವಂತೆ ಅವರು ಕರೆ ನೀಡಿದರು.

ಸರಕಾರಿ ಮಾದರಿ ಕನ್ನಡ ಶಾಲೆಯ ಹತ್ತಿರ ಮಾನವ ಸಎಅಪಳಿ ನಿರ್ಮಿಸಿ ಮತದಾನದ ಘೋಷಣೆಗಳನ್ನು ಕೂಗುವ ಮೂಲಕ ಮಾಳಾಪೂರ ಬಸ್ ನಿಲ್ದಾಣದಲ್ಲಿ ಎಲ್ಲರೂ ಸೇರಿ ಮತದಾನ ಪ್ರತಿಜ್ಞಾ ವಿದಿ ಭೋದಿಸಿ, ಮನೆ ಮನೆಗೆ ತೆರಳಿ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರು ನಂತರ ಎಲ್ಲ ಬೂತಿನ ಮತಗಟ್ಟೆಗಳನ್ನು ಪರಿಶೀಲಿಸಿ ಮತದಾನ ಜಾಗೃತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಲು ಹಾಗೂ ಮೇ 7, 2024 ರಂದು ತಪ್ಪದೆ ಮತದಾನ ಮಾಡುವಂತೆ ಸಾರ್ವಜನಿಕರಿಗೆ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು, ಆರೋಗ್ಯಾಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಹಾಯಕ ನಿರ್ದೇಶಕರು (ಗ್ರಾ.ಉ) ತಾ.ಪಂ ಧಾರವಾಡ, ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತರು, ಬಿ.ಎಲ್.ಓಗಳು, ತಾಲೂಕ ಪಂಚಾಯತಿಯ ಎಲ್ಲ ಅಧಿಕಾರಿ, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಹುಬ್ಬಳ್ಳಿಯ ವಿವಿಧ ಮಾಲ್‌ಗಳಲ್ಲಿ ಮತದಾನ ಜಾಗೃತಿ






**ಧಾರವಾಡ :** ಜಿಲ್ಲಾಡಳಿತ, ಹುಬ್ಬಳ್ಳಿ – ಧಾರವಾಡ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯಿಂದ ಹುಬ್ಬಳ್ಳಿ ಮಹಾನಗರದ ವಿವಿಧ ಪ್ರತಿಷ್ಠಿತ ಮಾಲ್ ಹಾಗೂ ಸೂಪರ್ ಮಾರ್ಕೆಟ್‌ಗಳಲ್ಲಿ ಮತದಾರ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಮತದಾನದ ಕುರಿತು ಸೆಲ್ಫೀ ಪಾಯಿಂಟ್ ಹಾಗೂ ಸ್ಟ್ಯಾಂಡಗಳನ್ನು (ಸ್ಟ್ಯಾಂಡೀಸ್)ಹುಬ್ಬಳ್ಳಿಯ ಯು ಮಾಲ್, ಲಕ್ಷ್ಮೀ ಮಾಲ್, ಓಯಾಸಿಸ್ ಮಾಲ್, ಸ್ಟೆಲ್ಲರ್ ಮಾಲ್, ಸ್ಯಾಟ್‌ಲೈಟ್ ಕಾಂಪ್ಲೆಕ್ಸ್‌ಗಳಲ್ಲಿ ಅಳವಡಿಸಲಾಗಿದ್ದು ಹುಬ್ಬಳ್ಳಿ ಜನತೆಯ ಈ ಸೆಲ್ಫೀ ಪಾಯಿಂಟ್‌ಗಳಲ್ಲಿ ಸೆಲ್ಫೀ ತೆಗೆದುಕೊಳ್ಳುತಿದಾರೆ ಎಂದು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಈಶ್ವರ ಉಳಾಗಡ್ಡಿ ಅವರು ತಿಳಿಸಿದರು.

ಮಹಾನಗರ ಪಾಲಿಕೆಯ ಮತದಾನದ ಕುರಿತು ಈ ಸೆಲ್ಫೀ ಪಾಯಿಂಟ್‌ಗಳ ಮೂಲಕ ವಿನೂತನವಾಗಿ ಮತದಾನ ಜಾಗೃತಿ ಮೂಡಿಸಲಾಗುತ್ತಿದೆ. ಹುಬ್ಬಳ್ಳಿ–ಧಾರವಾಡ ಮಹಾನಗರ ವ್ಯಾಪ್ತಿಯ 82 ವಾರ್ಡ್‌ಗಳಲ್ಲಿ ಮತದಾನ ಪ್ರಚಾರಕ್ಕಾಗಿ ಟ್ಯಾಬ್ಲೊ ವಾಹನ ಸಂಚರಿಸಲಿದೆ, ಇದರ ಜೊತೆಯಲ್ಲಿ ಎಲ್.ಇ.ಡಿ ವಾಹನ ಸಹ ಎಲ್ಲ ವಾರ್ಡಗಳಲ್ಲಿ ಸಂಚರಿಸಲಿದೆ.

ಸ್ಮಾರ್ಟ್ ಸಿಟಿ ಯೋಜನೆಡಿಯ 36 ಡಿಜಿಟಲ್ ಡಿಸ್‌ಪ್ಲೈ ಬೋರ್ಡ್‌ಗಳಲ್ಲಿ ಮತದಾನ ಜಾಗೃತಿ ಕುರಿತು ವಿಡಿಯೋಗಳನ್ನು ಪ್ರಸಾರ ಮಾಡಲಾಗುತ್ತಿದೆ. 15 ಹೋರ್ಲ್ಡಿಂಗ್ಸ್‌ಗಳನ್ನು ಅಳವಡಿಸಲಾಗಿದೆ, ಪ್ರತೀದಿನ ಮನೆ–ಮನೆಗೆ ಹೋಗಿ ಕಸ ಹೊತ್ಯೊಯುವ ವಾಹನಗಳಲ್ಲಿ ಮತದಾನ ಜಾಗೃತಿ ಜಿಂಗಲ್ಸ್‌ಗಳನ್ನು ಅಳವಡಿಸಲಾಗಿದೆ ಎಂದು ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಆಯುಕ್ತ ಈಶ್ವರ ಉಳಾಗಡ್ಡಿ ಅವರು ತಿಳಿಸಿದ್ದಾರೆ.

# ಜೀವನ ಶ್ರೇಯಸ್ಸಿಗೆ ಧರ್ಮಾಚರಣೆ ಮೂಲ: ಶ್ರೀ ರಂಭಾಪುರಿ ಜಗದ್ಗುರುಗಳು

**ಸಕಲೇಶಪುರ :** ಜನ್ಮ ಜನ್ಮಗಳ ಪುಣ್ಯದ ಫಲದಿಂದ ಮಾನವ ಜನ್ಮ ಪ್ರಾಪ್ತವಾಗಿದೆ. ಜೀವನದ ಉನ್ನತಿಗೆ ಬದುಕಿನ ಶ್ರೇಯಸ್ಸಿಗೆ ಧರ್ಮಾಚರಣೆ ಮೂಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು

ಅವರು ಶುಕ್ರವಾರ ತಾಲೂಕಿನ ಯಸಳೂರು ತೆಂಕಲಗೂಡು ಬೃಹನ್ಮಠದಲ್ಲಿ ಜರುಗಿದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖದಾಯಕ ಶಾಂತಿ ನೆಮ್ಮದಿಯ ಬದುಕಿಗೆ ಧರ್ಮ ಮತ್ತು ಧರ್ಮಾಚರಣೆ ಬಹಳಷ್ಟು ಮುಖ್ಯ. ಅರಿವು ಆಚರಣೆಗಳನ್ನು ಮೈಗೂಡಿಸಿಕೊಂಡು ಬಾಳಿದರೆ ಜೀವನ ಉಜ್ವಲಗೊಳ್ಳುವುದು. ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವ ಬಂಧುತ್ವದ ಸಾಮರಸ್ಯ ಸೌಹಾರ್ದತೆಯ ಅಮೂಲ್ಯ ಬೋಧಾಮೃತವನ್ನು ಬೋಧಿಸಿದ್ದಾರೆ. ಅಹಿಂಸಾದಿ ಧ್ಯಾನ ಪರ್ಯಂತರವಾದ ದಶ ಧರ್ಮ ಸೂತ್ರಗಳು ಸಕಲರ ಬಾಳಿನ ಉತ್ಕರ್ಷತೆಗೆಕಾರಣವಾಗಿವೆ. ಮಾನವೀಯ ಆದರ್ಶ ಮೌಲ್ಯಗಳನ್ನು ವೀರಶೈವ ಧರ್ಮ



ಎತ್ತಿ ಹಿಡಿದಿದೆ. ಜಾತಿ ಜನಾಂಗಗಳ ಗಡಿ ಮೀರಿ ಸರ್ವರ ಒಳಿತಿಗಾಗಿ ಸದಾ ಶ್ರಮಿಸಿದೆ. ವೀರಶೈವ ಧರ್ಮ ವೃಕ್ಷದ ಮೂಲ ಪರಮಾಚಾರ್ಯರಾದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಮ್ಮಿಕೊಂಡಿರುವುದು ತಮಗೆ ಸಂತಸ ತಂದಿದೆ ಎಂದ ಅವರು ಲಿಂ. ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ತೆಂಕಲಗೂಡು ಬೃಹನ್ಮಠದ ಉನ್ನತಿಗಾಗಿ ಶ್ರಮಿಸಿದ್ದನ್ನು ನೆನಪಿಸಿದರು. ಇಂದಿನ ಚನ್ನಸಿದ್ದೇಶ್ವರ ಶ್ರೀಗಳು ಹಿಂದಿನ ಶ್ರೀಗಳ ಸತ್ಯ ಸಂಕಲ್ಪಗಳನ್ನು ಸಾಕಾರಗೊಳಿಸಿರುವುದು ಭಕ್ತ ಸಮೂಹಕ್ಕೆ ಸಂತೋಷ ತಂದಿದೆ ಎಂದರು. ನೇತೃತ್ವ ವಹಿಸಿದ ಚನ್ನಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ವೀರಶೈವ ಧರ್ಮ ಕಾಯಕ ಮತ್ತು ದಾಸೋಹಕ್ಕೆ ಪ್ರಾಮುಖ್ಯತೆ ಕೊಟ್ಟಿದೆ. ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಸಂಸ್ಕಾರ ಮುಖ್ಯ. ಜಗದ ಕತ್ತಲೆ ಕಳೆಯಲು ಸೂರ್ಯ ಬದುಕಿನ ಕತ್ತಲೆ ಕಳೆಯಲು ಗುರು ಬೇಕು. ಲಿಂ. ಚನ್ನಮಲ್ಲಿಕಾರ್ಜುನ ಶ್ರೀಗಳವರು ಹಾಕಿದ ದಾರಿಯಲ್ಲಿ ಮುನ್ನಡೆದು ಶ್ರೀ ಮಠದ ಉನ್ನತಿಯನ್ನು ಮಾಡುತ್ತೇವೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಶ್ರೀರಕ್ಷೆ ಸದಾ ನಮಗಿರಲೆಂದರು. ಸಮ್ಮುಖ ವಹಿಸಿದ ಎಡೆಯೂರು ರೇಣುಕ ಶಿವಾಚಾರ್ಯರು, ಶನಿವಾರ ಸಂತೆ ಮುದ್ದಿನಕಟ್ಟೆ ಮಠದ ಅಭಿನವ ಸಿದ್ಧಲಿಂಗ ಶಿವಾಚಾರ್ಯರು, ಹೆಗ್ಗಡಹಳ್ಳಿಮಠದ ಷಡ್ಭಾವರಹಿತೇಶ್ವರ ಶಿವಾಚಾರ್ಯರು, ಪಾಲ್ಗೊಂಡು ಧರ್ಮ ಮತ್ತು ಗುರುವಿನ ಹಿರಿಮೆಯನ್ನು ಕೊಂಡಾಡಿದರು.

ಅ.ಭಾ.ವೀರಶೈವ ಮಹಾಸಭೆ ಹಾಸನ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಆರ್.ಗುರುದೇವ ಸಮಾರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಈ ಪವಿತ್ರ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಸಕಲೇಶಪುರ ಮಲೆನಾಡು ವೀರಶೈವ ಸಮಾಜದ ಅಧ್ಯಕ್ಷ ದಿವಾನ್ ದೇವರಾಜ ಪಾಲ್ಗೊಂಡಿದ್ದರು.

ಸಮಾರಂಭದ ಅಂಗವಾಗಿ ನೂತನ ಗುರು ನಿವಾಸ ಉದ್ಘಾಟನೆ, ಮೃತ್ಯುಂಜಯ ಹೋಮ, ಮಾಸ ಪತ್ರಿಕೆ ಬಿಡುಗಡೆ, ಪುಸ್ತಕ ಬಿಡುಗಡೆ ಹಾಗೂ ಜಂಗಮ ವಟುಗಳಿಗೆ ಶಿವದೀಕ್ಷಾ ಅಯ್ಯಾಚಾರ ಜರುಗಿದವು. ದಾನಿಗಳಿಗೆ ಮತ್ತು ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಯಸಳೂರು ವೀರಶೈವ ಸಮಾಜದ ಅಧ್ಯಕ್ಷ ಬಿ.ಎಂ.ಶಿವರಾಜ ಸ್ವಾಗತಿಸಿದರು. ಯಡೇಹಳ್ಳಿ ಆರ್. ಮಂಜುನಾಥ ಮತ್ತು ಶ್ರೀಮತಿ ಸುಜಾತಾ ಜಯರಾಜ್ ನಿರೂಪಣೆ ಮಾಡಿದರು. ಸಮಾರಂಭದ ನಂತರ ಅನ್ನ ದಾಸೋಹ ನೆರವೇರಿತು.

ಸಮಾರಂಭಕ್ಕೂ ಮುನ್ನ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಭಕ್ತ ಸಮೂಹಕ್ಕೆ ಆಶೀರ್ವದಿಸಿದರು.

# ರಾಜಶೇಖರ್ ಸ್ವಾಗತಿಸಿದ ಮಹಿಳಾ ಕಾಂಗ್ರೆಸ್ ಮುಖಂಡರು



**ಕೊಪ್ಪಳ :** ರಾಜ್ಯ ಕಾಂಗ್ರೆಸ್ ಸರಕಾರದ ಜನಪರ ಆಡಳಿತ ಮತ್ತು ಸ್ಥಳಿಯ ಶಾಸಕರು ಅವಿರತ ಸೇವೆ ಪರಿಗಣಿಸಿ ಕಾಂಗ್ರೆಸ್ ಸೇರಿದ ಬಿಜೆಪಿ ನಗರಸಭೆ ಸದಸ್ಯ ರಾಜಶೇಖರ್ ಆಡೂರ್ ಅವರನ್ನು ಜಿಲ್ಲಾ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜ್ಯೋತಿ ಎಂ. ಗೊಂಡಬಾಳ ನೇತೃತ್ವದಲ್ಲಿ ಸ್ವಾಗತಿಸಿದರು.

ನಗರದ ವಾರಕಾರ ಓಣಿಯ ಅವರ ಮನೆಯಲ್ಲಿ ಶಾಸಕ ರಾಘವೇಂದ್ರ ಹಿಟ್ನಾಳ ಮತ್ತು ಲೋಕಸಭೆ ಅಭ್ಯರ್ಥಿ ರಾಜಶೇಖರ್ ಹಿಟ್ನಾಳ ಸಮ್ಮುಖದಲ್ಲಿ ಪಕ್ಷಕ್ಕೆ ಸೇರ್ಪಡೆಗೊಂಡ ಸಂದರ್ಭದಲ್ಲಿ ಅವರನ್ನು ಕೊಪ್ಪಳ ಜಿಲ್ಲಾ ಮಹಿಳಾ ಕಾಂಗ್ರೆಸ್ ವತಿಯಿಂದ ಸನ್ಮಾನಿಸಿ ಸ್ವಾಗತಿಸಿದರು.

ನಗರಸಭೆ ಸದಸ್ಯರಾಗಿ, ಶ್ರೀ ಗವಿಸಿದ್ಧೇಶ್ವರ ಬ್ಯಾಂಕ್‌ಗೆ ಎರಡು ಬಾರಿ ಅಧ್ಯಕ್ಷರಾಗಿ ಜನಪರವಾಗಿ ಸೇವೆ ಮಾಡಿರುವ ರಾಜಶೇಖರ್ ಅವರ ಆಗಮನದಿಂದ ಕಾಂಗ್ರೆಸ್‌ಗೆ ಮತ್ತಷ್ಟು ಬಲ ಬಂದಿದೆ ಎಂದವರು ತಿಳಿಸಿದರು.

ಈ ಸಂದರ್ಭದಲ್ಲಿ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಾಟನ್ ಪಾಶಾ, ಎಸ್.ಟಿ. ಘಟಕ ತಾಲೂಕ ಅಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಅಕ್ಬರ್ ಪಾಶಾ, ಮುತ್ತುರಾಜ ಕುಷ್ಟಗಿ, ಕುರಗೋಡ ರವಿ ಯಾದವ್, ಪ್ರಸನ್ನ ಗಡಾದ, ಶರಣಪ್ಪ ಸಜ್ಜನ, ಕೆ.ಎಂ. ಸೈಯ್ಯದ್, ಬಾಲಚಂದ್ರ ಶ್ಯಾಮುಯೇಲ್ ಇತರರು ಇದ್ದರು.

# ಗ್ಯಾರಂಟಿ ಯೋಜನೆಗಳ ಸದಸ್ಯರಾಗಿ ನೇಮಕ

**ಚಿಮ್ಮಡ :** ರಬಕವಿ–ಬನಹಟ್ಟಿ ತಾಲೂಕು ಗ್ರಾರಂಟಿ ಯೋಜನೆಗಳ ಅನುಷ್ಠಾನ ಸಮೀತಿಗೆ ಗ್ರಾಮದ ಇಬ್ಬರನ್ನು ನೇಮಕಗೊಳಿಸಿ ಆದೇಶ ಹೊರಡಿಸಿದೆ.





ರಾಜ್ಯ ಸರಕಾರದ ಮಹತ್ವಾಕಾಂಕ್ಷೆಯ ಶಕ್ತಿ, ಗ್ರಹಲಕ್ಷ್ಮಿ, ಗ್ರಹಜ್ಯೋತಿ, ಅನ್ನಭಾಗ್ಯ, ಯುವಶಕ್ತಿ ಈ ಪಂಚ ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ರಾಜ್ಯ ಜಿಲ್ಲೆ, ತಾಲೂಕು ಮಟ್ಟದಲ್ಲಿ ಅನುಷ್ಠಾನ ಸಮೀತಿ ರಚಿಸಲಾಗಿದ್ದು ಜಿಲ್ಲಾ ಉಸ್ತುವಾರಿ ಸಚಿವರಾದ ಆರ್. ಬಿ. ತಿಮ್ಮಾಪೂರ, ವಿಧಾನ ಪರಿಷತ್ ಸದಸ್ಯರಾದ ಉಮಾಶ್ರೀ, ಧುರೀಣ ಸಿದ್ದು ಕೊಣ್ಣೂರ ಸಿಫಾರಸ್ಸಿನ ಮೇರೆಗೆ ಸ್ಥಳೀಯ ಕಾಂಗ್ರೆಸ್ ಧುರೀಣ–ರಾದ ಪ್ರವೀಣ ಪೂಜಾರಿ, ಹಾಗೂ ರವಿ ದೊಡವಾಡ ಅವರನ್ನು ರಬಕವಿ–ಬನಹಟ್ಟಿ ತಾಲೂಕು ಗ್ರಾರಂಟಿ ಯೋಜನೆಗಳ ಅನುಷ್ಠಾನ ಸಮೀತಿಗೆ ಸದಸ್ಯರನ್ನಾಗಿ ನೇಮಕಗೊಳಿಸಿ ಆದೇಶ ನೀಡಿದೆ.



**ದತ್ತಿ ಪ್ರಶಸ್ತಿಗೆ ಆಯ್ಕೆ–ಬೀಳಗಿ ತಾಲೂಕು 5ನೇ ಕನ್ನಡ ಸಾಹಿತ್ಯ ಸಮ್ಮೇಳನ ಸವಿನೆನಪಿಗಾಗಿ ನೀಡಿದ ದತ್ತಿ ಪ್ರಶಸ್ತಿಗೆ ತೇರದಾಳದ ಹಿರಿಯ ಸಾಹಿತಿ ಎಸ್.ಆರ್. ರಾವಳ ಅವರ ಮಲ್ಲಯ್ಯನ ಬೆಲ್ಲ ಕವನ ಸಂಕಲ ಆಯ್ಕೆಗೊಂಡ ಹಿನ್ನಲೆಯಲ್ಲಿ ಬೀಳಗಿಯಲ್ಲಿ ನಡೆದ ಸಮಾರಂಭದಲ್ಲಿ ರಾವಳ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.**

# ಶ್ರೀ ರಂಭಾಪುರಿ ಪೀಠದಲ್ಲಿ ಸಂಗೀತ ದಿಗ್ಗಜರಿಗೆ ಸತ್ಕಾರ





**ರಂಭಾಪುರಿ ಪೀಠ(ಬಾಳೆಹೊನ್ನೂರು) :** ಬದುಕಿನ ಜಂಜಾಟದಲ್ಲಿ ಸದಾ ಮುಳುಗಿರುವವರಿಗೆ ಸಂಗೀತ ಸಂತೋಷ ಸಮಾಧಾನ ನೀಡುವ ಸಂಜೀವಿನಿಯಾಗಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಇತ್ತಿಚೆಗೆ ಶ್ರೀ ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಸಂಗೀತ ಸೌರಭ ಹಾಗೂ ಸಂಗೀತ ದಿಗ್ಗಜರಿಗೆ ಸತ್ಕಾರ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಗದಗಿನ ಪಂ.ಡಾ॥ ರಾಜಗುರು ಗುರುಸ್ವಾಮಿ ಕಲಕೇರಿ ಹಾಗೂ ಧಾರವಾಡದ ಪಂ. ಡಾ॥ ಎಮ್.ವೆಂಕಟೇಶ ಕುಮಾರ್ ಇವರಿಗೆ ವಿಶೇಷ ಸತ್ಕಾರ ಹಾಗೂ ಗೌರವ ಗುರುರಕ್ಷೆ ನೀಡಿದ ನಂತರ ಮಾತನಾಡಿದ ಅವರು ಪ್ರತಿ ವರುಷದ ಜಯಂತಿ ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಉಭಯ ಸಂಗೀತ ದಿಗ್ಗಜರು ಎರಡು ಗಂಟೆಗಳ ವಿಶೇಷ ಸಂಗೀತ ನಡೆಸಿಕೊಡುವುದಾದರೆ ಅದಕ್ಕೆ ಅವಕಾಶ ಕಲ್ಪಿಸುವುದಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಪಂ. ಡಾ॥ ಎಮ್.ವೆಂಕಟೇಶ ಕುಮಾರ್ ಅವರು ಬಸಂತ ರಾಗ, ದೃತ ತಾಳದಲ್ಲಿ ಪಶುಪತೇ ಗಿರಿಜಾಪತಿ, ಹಾನಗಲ್ ಕುಮಾರಸ್ವಾಮಿಗಳಿಂದ ವಿರಚಿತ 'ಸುಶಾಂತ ಗುರುವರೇಣ್ಯ ರೇಣುಕಾರ್ಯಭೋ' ಗೀತೆಯನ್ನು ಭೀಮಪಲಾಸ ರಾಗ ಜಪ್ ತಾಳದಲ್ಲಿ ನಂತರ ಗದಗಿನ ಕವಿ ಪುಟ್ಟರಾಜ ಗವಾಯಿಗಳಿಂದ ವಿರಚಿತ ವೀರಶೈವದ ಜಗದ್ಗುರು ಪಂಚಾಚಾರ್ಯರ ನಮಿಸುವೆನು' ಹಾಡನ್ನು ರಾಗೇಶ್ರೀ ರಾಗ ಕೇರವ ತಾಳದಲ್ಲಿ ಅಮೋಘವಾಗಿ ಪ್ರಸ್ತುತಪಡಿಸಿ ಜನಮನ ಸೂರೆಗೊಂಡರು. ನಂತರ ಪಂ. ಡಾ॥ ರಾಜಗುರು ಗುರುಸ್ವಾಮಿ ಕಲಕೇರಿ ಅವರು 'ಮಲತ್ರಯಗಳನು ತೊಲಗಿಸುವಂಥ ಜಾಣ್ಮೆಯುಳ್ಳವನೇ ವೀರಶೈವನು' ಅಲ್ಲಮಪ್ರಭುಗಳ ವಚನವನ್ನು ಜೋಗ ರಾಗ ತೀನತಾಳದಲ್ಲಿ ಹಾಗೂ ತಮ್ಮ ಸ್ವರಚಿತ ಕವನ 'ಅಂದಿಂದು ಕಂದದಾ ಮುಂದೆಂದು ನಂದದಾ ಪಂಚ ಪೀಠಾಧೀಶರ ಬೆಳಕು' ಗೀತೆಯನ್ನು ಚಾಂದ ರಾಗದಲ್ಲಿ ದಾದ್ರಾ ತಾಳದಲ್ಲಿ ಪ್ರಸ್ತುತಪಡಿಸಿ ಶ್ರೋತೃಗಳ ಮನಸ್ಸಿಗೆ ಮುದ ನೀಡಿದರು. ಗದಗಿನ ಶರಣಯ್ಯನವರು ತಬಲಾ, ಪಂ.ಬಸವರಾಜ ಹಿರೇಮಠ ಹಾರ್ಮೋನಿಯಂ ಸಾಥ ನೀಡಿ–ದರು.

ಎಡೆಯೂರು ರೇಣುಕ ಶಿವಾಚಾರ್ಯರು, ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಸೇರಿದಂತೆ ವಿವಿಧ ಮಠಾಧೀಶರು ಸಮಾರಂಭದಲ್ಲಿ ಉಪಸ್ಥಿತರಿದ್ದರು.ಹಂಪಸಾಗರದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು ಪ್ರಾಸ್ತಾವಿಕ ಮಾತನಾಡಿದರು. ಗದಗಿನ ಗಾನಭೂಷಣ ವೀರೇಶ ಕಿತ್ತೂರ ಪ್ರಾರ್ಥನೆ ಹಾಡಿದರು. ಡಾ॥ ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

# ಶ್ರೀ ಅಗ್ನಿ ಬನ್ನಿರಾಯ ಸ್ವಾಮಿ ಜಯಂತಿ: ಪುಷ್ಪನಮನ ಸಲ್ಲಿಕೆ

**ಕೊಪ್ಪಳ :** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಶ್ರೀ ಅಗ್ನಿ ಬನ್ನಿರಾಯ ಸ್ವಾಮಿ ಜಯಂತಿ ಆಚರಿಸಲಾಯಿತು.

ಲೋಕಸಭಾ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ ಅವರು ಶ್ರೀ ಅಗ್ನಿ ಬನ್ನಿರಾಯ ಸ್ವಾಮಿ ರವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ



ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಳ್ಳಿ, ಜಿಲ್ಲಾಧಿಕಾರಿ ಕಚೇರಿಯ ಜಗದೀಶ್, ಸಲೀಂ, ಮಹೇಂದ್ರ ಸಾಲಿಮನಿ, ಈರಣ್ಣ ಸೇರಿದಂತೆ ಜಿಲ್ಲಾಧಿಕಾರಿ ಕಚೇರಿಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಚುನಾವಣಾ ನೀತಿ ಸಂಹಿತೆ: ಪ್ರಕರಣ ದಾಖಲು

**ಬಾಗಲಕೋಟೆ :** ಜಿಲ್ಲೆಯ ವಿವಿದ ಚೆಕ್‌ಪೋಸ್ಟಗಳಲ್ಲಿ ತಪಾಸಣೆ ವೇಳೆ ದಾಖಲೆ ಇಲ್ಲದೇ ನಗದು ಹಣವನ್ನು ಜಪ್ತಿ ಮಾಡಿಕೊಳ್ಳಲಾಗಿದೆ. ಲಕ್ಷಾನಟ್ಟಿ ಚೆಕ್‌ಪೋಸ್ಟನಲ್ಲಿ 3.44 ಲಕ್ಷ ರೂ, ಅಮೀನಗಡ ಜೆ.ಕೆ.ಲಾಡ್ಜನಲ್ಲಿ ಮಾರ್ಚ 29 ರಂದು ರಾತ್ರಿ ಪ್ಲಾಯಿಂಗ್ ಸ್ಕ್ವಾಡ್ ತಂಡದ ಅಧಿಕಾರಿ ಅರುಣ ಪಾಟೀಲ ತಪಾಸನೆ ಮಾಡುತ್ತಿರುವ ವೇಳೆ 1 ಲಕ್ಷ ರೂ.ಗಳನ್ನು ವಶಪಡಿಸಿಕೊಳ್ಳಲಾಗಿದೆ. ಕಮತಗಿ ಚೆಕ್‌ಪೋಸ್ಟನಲ್ಲಿ ಸ್ಟ್ಯಾಟಿಕ್ ಸರ್ವೆಲೆನ್ಸ್ ತಂಡದ ಅಧಿಕಾರಿ ಎಂ.ಎಸ್. ಹಾಲವರ ತಪಾಸಣೆ ವೇಳೆ ದಾಖಲೆ ಇಲ್ಲದ 59 ಸಾವಿರ ರೂ.ಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದ್ದಾರೆ.

# ವಿಜ್ಞಾನ ವಿಷಯ ಪರೀಕ್ಷೆ: ಓರ್ವ ವಿದ್ಯಾರ್ಥಿ ಡಿಬಾರ್

**ಬಾಗಲಕೋಟೆ :** ಜಿಲ್ಲೆಯಲ್ಲಿ ಶನಿವಾರ ನಡೆದ ಎಸ್.ಎಸ್.ಎಲ್.ಸಿ ವಿಜ್ಞಾನ ವಿಷಯ ಪರೀಕ್ಷೆಯಲ್ಲಿ ಬೀಳಗಿ ಆದರ್ಶ ವಿದ್ಯಾಲಯದ ಪರೀಕ್ಷಾ ಕೇಂದ್ರದಲ್ಲಿ ಓರ್ವ ವಿದ್ಯಾರ್ಥಿ ಡಿಬಾರ್ ಆಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಬಿ.ಕೆ.ನಂದನೂರು ತಿಳಿಸಿದ್ದಾರೆ.

ವಿಜ್ಞಾನ ವಿಷಯ ಪರೀಕ್ಷೆಯಲ್ಲಿ ಜಿಲ್ಲೆಯಲ್ಲಿ ನೊಂದಣಿಯಾದ ಒಟ್ಟು 31918 ವಿದ್ಯಾರ್ಥಿಗಳ ಪೈಕಿ 31617 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. 301 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ. ಬಾದಾಮಿ ತಾಲೂಕಿನಲ್ಲಿ ಪರೀಕ್ಷೆಗೆ ನೊಂದಣಿಯಾದ 5360 ಪೈಕಿ 5321 ವಿದ್ಯಾರ್ಥಿಗಳು ಹಾಜರಾಗಿ 39 ಜನ ಗೈರು ಹಾಜರಾದರೆ, ಬಾಗಲಕೋಟೆ ತಾಲೂಕಿನಲ್ಲಿ ನೊಂದಾಯಿಸಿದ 4758 ಪೈಕಿ 4709 ಜನ ಹಾಜರಿದ್ದು, 49 ಜನ ಗೈರು ಹಾಜರಾಗಿದ್ದಾರೆ.

ಬೀಳಗಿ ತಾಲೂಕಿನಲ್ಲಿ ನೊಂದಣಿಯಾದ 2880 ವಿದ್ಯಾರ್ಥಿಗಳ ಪೈಕಿ 2855 ಜನ ಹಾಜರಾಗಿ 25 ಜನ ಗೈರು ಹಾಜರಾಗಿರುತ್ತಾರೆ. ಹುನಗುಂದ ತಾಲೂಕಿನಲ್ಲಿ 5165 ಪೈಕಿ 5122 ಜನ ಹಾಜರಾಗಿ 43 ಜನ ಗೈರು ಹಾಜರಾಗಿದ್ದಾರೆ. ಜಮಖಂಡಿ ತಾಲೂಕಿನಲ್ಲಿ 8403 ಪೈಕಿ 8317 ಜನ ಗೈರು ಹಾಜರಾಗಿ 86 ವಿದ್ಯಾರ್ಥಿಗಳು ಗೈರು ಹಾಜರಾಗಿರುತ್ತಾರೆ. ಮುಧೋಳ ತಾಲೂಕಿನಲ್ಲಿ 5352 ವಿದ್ಯಾರ್ಥಿಗಳ ಪೈಕಿ 5293 ಹಾಜರಾಗಿ 59 ಜನ ಗೈರು ಹಾಜರಾಗಿರುತ್ತಾರೆ ಎಂದು ತಿಳಿಸಿದ್ದಾರೆ.

## ನೆಟ್‌ಬಾಲ್ ಕ್ರೀಡಾಕೂಟ: ರಾಷ್ಟ್ರಮಟ್ಟಕ್ಕೆ ಆಯ್ಕೆ



**ಮಹಾಲಿಂಗಪುರ :** ಸಮೀಪದ ರನ್ನಬೆಳಗಲಿ ಪಟ್ಟಣದ ಶ್ರೀಗುರು ಮಹಾಲಿಂಗೇಶ್ವರ ಪಿಯು ಕಾಲೇಜಿನ ವಿದ್ಯಾರ್ಥಿನಿ ಸುಜಾತಾ ಚೌಗಲಾ ನೆಟ್‌ಬಾಲ್ ಕ್ರೀಡಾಕೂಟದಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. 2023 ನವೆಂಬರ್ 11ರಂದು ಕೊಪ್ಪದಲ್ಲಿ ಜಗುಗಿದ್ದ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದ್ದಾಳೆ. ಇದೇ ಏಪ್ರೀಲ್ 25ರಂದು ದೆಹಲಿಯಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾಳೆ. ವಿದ್ಯಾರ್ಥಿನಿಯ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿ ಕಾರ್ಯದರ್ಶಿ ಪಂಡಿತ ಪೂಜಾರಿ, ಪ್ರಾಚಾರ್ಯ ಪಿ.ಎಚ್.ನಾಯಕ, ಉಪನ್ಯಾಸಕರು ಹಾಗೂ ಆಡಳಿತ ಮಂಡಳಿ ಸದಸ್ಯರು ಅಭಿನಂದಿಸಿದ್ದಾರೆ.

# ಅಷ್ಟಾಂಗಯೋಗದಿಂದ ಆರೋಗ್ಯಪೂರ್ಣ ಜೀವನ: ಪ್ರಕಾಶ ರಾಯಸ್



**ಮಹಾಲಿಂಗಪುರ :** ಮನುಷ್ಯನ ಆರೋಗ್ಯಪೂರ್ಣ ಜೀವನಕ್ಕೆಯಮ, ನಿಯಮ, ಆಸನ, ಪ್ರಾಣಾಯಾಮ, ಪತ್ಯಾಹಾರ, ಧಾರಣ, ಜ್ಞಾನ, ಸಮಾಧಿ ಸೇರಿದಂತೆ ಅಷ್ಟಾಂಗಯೋಗವನ್ನು ಕಲಿತು, ನಿತ್ಯ ಜೀವನದಲ್ಲಿ ಯೋಗಾಭ್ಯಾಸವನ್ನು ಅಳವಡಿಸಿಕೊಳ್ಳಬೇಕೆಂದು ಹೊನ್ನಾವರದ ಪಾರಂಪರಿಕ ವೈದ್ಯ ಪ್ರಕಾಶ ಪಿ.ರಾಯಸ್ ಹೇಳಿದರು.

ಪಟ್ಟಣದ ಸಿದ್ದಾರೂಢ ಬ್ರಹ್ಮವಿದ್ಯಾಶ್ರಮದಲ್ಲಿ ಹುರಕಡ್ಲಿ ಫೌಂಡೇಶನ ಹಾಗೂ ಸಿದ್ದಾರೂಢ ಆಶ್ರಮದಲ್ಲಿ ನಡೆಯುತ್ತಿರುವ ಆರೋಗ್ಯ ಮತ್ತು ಅರಿವು ಹಾಗೂ ನಿಸರ್ಗ ಚಿಕಿತ್ಸಾ ಶಿಬಿರದಲ್ಲಿ ಕಡಿಮೆ ವೆಚ್ಚದಲ್ಲಿ ಕ್ಯಾನ್ಸರ್ ಹಾಗೂ ಮೊನಕಾಲು, ಕೀಲು ನೋವು, ನರದೌರ್ಬಲ್ಯ, ಬಾಡಿ ಬ್ಯಾಲೆನ್ಸ್ ರೋಗಗಳಿಗೆ ಪಾರಂಪರಿಕ ವೈದ್ಯ ಪದ್ದತಿಯಲ್ಲಿ ಚಿಕಿತ್ಸೆ ನೀಡಿ ಮಾತನಾಡಿದ ಅವರು ಕಳೆದ 15 ವರ್ಷಗಳಿಂದ ಕ್ಯಾನ್ಸರ್ ನಂತಹ ಮಾರಣಾಂತಿಕ ಖಾಯಿಲೆಗಳಿಗೆ ಚಿಕಿತ್ಸೆ ನೀಡುತ್ತಿದ್ದೇನೆ. ಇಲ್ಲಿಯವರೆಗೆ ನಮ್ಮಲ್ಲಿ ಚಿಕಿತ್ಸೆ ಪಡೆದ ಸಾವಿರಾರು ಜನರು ಗುಣಮುಖರಾಗಿದ್ದಾರೆ ಎಂದರು.

ಇಂದಿನ ಒತ್ತಡದ ಜೀವನದಲ್ಲಿ ಮನುಷ್ಯನಿಗೆ ಆಹಾರ, ಬದುಕು ರೀತಿಗಳ ನಿಯಮಗಳಿಲ್ಲದೇ ಹಲವಾರು ರೋಗಗಳಿಗೆ ತುತ್ತಾಗುತ್ತಿದ್ದಾನೆ. ರೋಗ ಮತ್ತು ಒತ್ತಡಗಳಿಲ್ಲದೇ ನೆಮ್ಮದಿಯ ಜೀವನಕ್ಕೆ ಯೋಗ ಹಾಗೂ ನಿಯಮಬದ್ದ ಜೀವನ ಪದ್ದತಿ ಅಗತ್ಯವಾಗಿದೆ. ಆರೋಗ್ಯ ಸುಧಾರಣೆಗೆ ಶುದ್ಧ ಆಮ್ಲಜನಕ, ಶುದ್ದ ಆಹಾರ, ನೀರು ಮತ್ತು ನಿಯಮಗಳ ಅರಿವು ಮುಖ್ಯವಾಗಿದೆ. ನಿತ್ಯ ಕನಿಷ್ಠ 4 ಲೀಟಗಿಂತ ಅಧಿಕ ನೀರು, ಸರಿಯಾದ ನಿದ್ದೆ, ಯೋಗ, ಧ್ಯಾನದ ಮೂಲಕ ಮಾನಸಿಕ ಒತ್ತಡ ಕಡಿಮೆಯಾಗಿ ಔಷಧ ರಹಿತ ಜೀವನ ನಡೆಸಲು ಪ್ರಯತ್ನಿಸಬೇಕು ಎಂದರು.

ನಿತ್ಯ ಯೋಗಾಭ್ಯಾಸ : ಶಿಬಿರದಲ್ಲಿ ನಿತ್ಯ ಮುಂಜಾನೆ 5–30ರಿಂದ 7ಗಂಟೆವರೆಗೆ ಬೆಂಗಳೂರಿನ ಮಹಾಂತೇಶ ಹಿರೇಮಠ ಅವರಿಂದ ಯೋಗಾಭ್ಯಾಸ ನಡೆಯುತ್ತಿದೆ. ಶನಿವಾರ ಮುಂಜಾನೆ ಬೆಳಗಾವಿಯ ಯೋಗ ಶಿಕ್ಷಕಿ ಕು.ಅದಿತಿ ಅವರಿಂದ ವಿಶೇಷ ಯೋಗಾಭ್ಯಾಸ ನಡೆಯಿತು.

ಹುರಕಡ್ಲಿ ಪೌಂಡೇಶನ ಸಂಸ್ಥಾಪಕ ಚನ್ನಬಸು ಹುರಕಡ್ಲಿ, ಧಾರವಾಡದ ಬಸವಾನಂದ ಸ್ವಾಮಿಜಿ, ಸಿದ್ದಾರೂಢ ಬ್ರಹ್ಮ ವಿದ್ಯಾಶ್ರಮದ ಸಹಜಾನಂದ ಸ್ವಾಮಿಜಿ, ಸಿದ್ದಾನಂದ ಭಾರತಿ ಸ್ವಾಮಿಜಿ, ರನ್ನಬೆಳಗಲಿಯ ಯೋಗಗುರು ಸದಾಶಿವ ಗುರೂಜಿ, ಮಲ್ಲೇಶಪ್ಪ ಕಟಗಿ, ಚಂದ್ರಶೇಖರ ಮೋರೆ, ಯಲ್ಲನಗೌಡ ಪಾಟೀಲ, ಮಹೇಶ ಇಟಕನ್ನವರ, ಹಣಮಂತ ಶಿರೋಳ, ಸಿದ್ದರಾಮಯ್ಯ ಗೋಠೆ, ಹಣಮಂತ ಮೀರಾಪಟ್ಟಿ, ಮಲ್ಲಾರಡ್ಡಿ ಯಾದವಾಡ, ಸಿದ್ದು ಧಡೂತಿ, ರಮೇಶ ಲಾತೂರ ಸೇರಿದಂತೆ ಹಲವರು ಇದ್ದರು.

## ಬೇಗಂ ತಲಾಬ್ ಕೆರೆ ಹೂಳು ಒಯ್ಯಲು ರೈತರಿಗೆ ಅವಕಾಶ

**ವಿಜಯಪುರ :** ವಿಜಯಪುರ ನಗರಕ್ಕೆ ನೀರು ಸರಬರಾಜು ಮಾಡುವ ದೊಡ್ಡ ಕೆರೆಯಾದ ಬೇಗಂ ತಲಾಬ್‌ನಲ್ಲಿ ಹೂಳು ಹೆಚ್ಚಾಗಿದ್ದು, ನೀರು ಸಂಗ್ರಹಣೆ ಸಾಮಥ್ಯ ಕಡಿಮೆ ಆಗಿರುತ್ತದೆ. ಕೆರೆಯ ಸಾಮರ್ಥ್ಯವನ್ನು ಹೆಚ್ಚಿಸಲು ಬೇಸಿಗೆ ಕಾಲದಲ್ಲಿ ಹೂಳನ್ನು ತಗೆಯುವುದು ಅವಶ್ಯಕವಾಗಿದೆ. ಈ ಕಾರಣದಿಂದ ಕೆರೆಯಲ್ಲಿನ ಹೂಳನ್ನು ಆಸಕ್ತ ರೈತರು ತಮ್ಮ ಜಮೀನುಗಳಿಗೆ ತೆಗೆದುಕೊಂಡ ಹೋಗಲು ನಿಯಮಾನುಸಾರವಾಗಿ ಅನುಮತಿ ಪಡೆಯಲು ಆಸಕ್ತ ರೈತರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ ಎಂದು ವಿಜಯಪುರ ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ಜಲ ದಿನಾಚರಣೆ

# ಪರಿಸರದ ಕೊಡುಗೆ ಎಲ್ಲ ಜೀವಿಗಳಿಗೆ ದೊರೆತ ವರದಾನ



**ಮಹಾಲಿಂಗಪುರ :** ಪರಿಸರವನ್ನು ನಾವು ಉಳಿಸಿದರೆ ಅದು ನಮ್ಮನ್ನು ಉಳಿಸುತ್ತದೆ.ಪರಿಸರದ ಕೊಡುಗೆ ಎಲ್ಲ ಜೀವಿಗಳಿಗೆ ದೊರೆತ ವರದಾನವಾಗಿದೆ ಎಂದು ಮುಧೋಳದ ನ್ಯಾಯಾಧೀಶೆ ಶೃತಿ ತೇಲಿ ಹೇಳಿದರು. ಸಮೀಪದ ರನ್ನಬೆಳಗಲಿ ಪಟ್ಟಣದ ಸದಾಶಿವ ನಗರದ ಸಿದ್ಧಾರೂಢ ಸರ್ಕಾರಿ ಪ್ರೌಢಶಾಲೆಯಲ್ಲಿ ಇತ್ತಿಚಿಗೆ ಹಮ್ಮಿಕೊಂಡ ವಿಶ್ವ ಜಲ ದಿನ ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಪಂಚಭೂತಗಳಲ್ಲಿ ನೀರು ಕೂಡ ಮಹತ್ವದ ಪಾತ್ರವನ್ನು ವಹಿಸಿದೆ.ಮುಂದಿನ ಪೀಳಿಗೆಗೆ ನೀರಿನ ಮೂಲ ರಹಸ್ಯವನ್ನು ಉಳಿಸಬೇಕಾಗಿದೆ.ಬುದ್ಧಿವಂತ–ರಿಂದಲೇ ಪರಿಸರ ಹಾಳಾಗುತ್ತಿದೆ. ಮನುಷ್ಯನ ಹೊರತು ಯಾವ ಜೀವ ಜಂತುಗಳಿಂದ ಕೂಡ ಪರಿಸರಕ್ಕೆ ಹಾನಿ ಉಂಟಾಗದು ಎಂದರು.

ಸಮಯ ಮತ್ತು ನಮ್ಮ ವಯಸ್ಸಿಗೆ ದುಡ್ಡಿಗಿಂತ ಹೆಚ್ಚು ಮೌಲ್ಯವಿದೆ.ಎಷ್ಟು ಬೇಕಾದರೂ ದುಡ್ಡು ಗಳಿಸಬಹುದು ಆದರೆ ಸಮಯ ಮತ್ತು ವಯಸ್ಸು ಮರಳಿ ಸಿಗುವುದಿಲ್ಲ. ವಿದ್ಯಾರ್ಥಿ ಜೀವನದಲ್ಲಿ ಅಥವಾ ಬದುಕಿನಲ್ಲಿ ಕೆಲವು ಸಾರಿ ಪರಿಸ್ಥಿತಿಯನ್ನು ಬದಲಾಯಿಸುವುದಕ್ಕಿಂತ ನಮ್ಮ ಮನಸ್ಥಿತಿಯನ್ನು ನಾವೇ ಬದಲಾಯಿಸಿಕೊಳ್ಳಬೇಕು ಎಂದರು.

ಮುಖ್ಯಶಿಕ್ಷಕ ರವಿ ಕಂಬಾರ ಅಧ್ಯಕ್ಷತೆ ವಹಿಸಿದ್ದರು.ಶಿಕ್ಷಕರಾದ ಎಸ್.ಎಸ್.ಉದಪುಡಿ, ಎಂ.ವಿ.ಕುಲಕರ್ಣಿ, ಎಂ.ಎಸ್.ಕಲ್ಯಾಣಿ, ಪಿ.ಕೆ.ಪವಾರ, ವಿ.ಎಂ.ಹೊಸೂರ, ಎಂ.ಬಿ. ಮುರಗೋಡ, ಎಸ್.ಕೆ.ಕಾಡದೇವರ, ಎಸ್.ಎಂ.ಮೇಗಾಡಿ, ಶೇಖರ ಬಾಗೇವಾಡಿ, ಗೀತಾ ಬಡಿಗೇರ, ರೇಣುಕಾ ಗಾಣಿಗೇರ, ಬಿ.ಪಿ.ಚೋಪಡೆ, ಎ.ಡಿ.ಎಳೆಮ್ಮಿ ಇದ್ದರು.

# ಶ್ರೀಶೈಲ ಜಾತ್ರೆಗೆ ವಿಶೇಷ ಬಸ್ ಸೌಲಭ್ಯ

**ಬಾಗಲಕೋಟೆ :** ಆಂದ್ರ ಪ್ರದೇಶ ರಾಜ್ಯದ ಶ್ರೀಶೈಲ ಜಾತ್ರೆಗೆ ಸಾರ್ವಜನಿಕ ಭಕ್ತಾಧಿಗಳ ಅನುಕೂಲಕ್ಕಾಗಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಬಾಗಲಕೋಟೆ ವಿಭಾಗದಿಂದ ಎಪ್ರೀಲ್ 2 ರಿಂದ 8 ವರೆಗೆ ಜಮಖಂಡಿ, ಮುಧೋಳ, ಬೀಳಗಿ, ಬಾಗಲಕೋಟೆ, ಬಾದಾಮಿ, ಗುಳೇದಗುಡ್ಡ, ಹುನಗುಂದ ಮತ್ತು ಇಲಕಲ್ಲ ಘಟಕಗಳಿಂದ ವಿಷೇಶ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ.

ಶ್ರೀಶೈಲ ಅಂತರ ರಾಜ್ಯ ಮಾರ್ಗದ ಸಾರಿಗೆಗಳಿಗೆ ಶಕ್ತಿ ಯೋಜನೆ ಅನ್ವಯಿಸುವದಿಲ್ಲ. ಒಂದೇ ಗುಂಪಿನಿಂದ ಕನಿಷ್ಠ 45–55 ಜನ ಪ್ರಯಾಣಿಕರು ಲಭ್ಯವಿದ್ದಲ್ಲಿ ದಾರಿ ಮಧ್ಯ ಬರುವ ಯಾತ್ರಾ ಸ್ಥಳಗಳ ದರ್ಶನ ಮಾಡಿಸಲಾಗುತ್ತದೆ. ಊಟಕ್ಕಾಗಿ ಉಚಿತ ಅನ್ನ ಸಂತರ್ಪಣೆ ಸ್ಥಳಗಳಲ್ಲಿ ನಿಲ್ಲಿಸಲಾಗುತ್ತದೆ. ಘಟಕದ ಕೇಂದ್ರ ಸ್ಥಾನದಿಂದ ಹೆಚ್ಚುವರಿ ಬಸ್ಸುಗಳಲ್ಲದೇ ಪ್ರಯಾಣಿಕರು ಇಚ್ಚಿಸಿದಲ್ಲಿ ಅವರ ಗ್ರಾಮಗಳಿಂದ ನೇರವಾಗಿ ಶ್ರೀಶೈಲಕ್ಕೆ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗುತ್ತದೆ. ಮಂತ್ರಾಲಯ ಹಾಗೂ ಮಹಾನಂದಿ ದರ್ಶನ ಮಾಡಲು ಇಚ್ಚಿಸಿದಲ್ಲಿ ಈ ಸ್ಥಳಗಳಿಗೆ ತಗಲುವ ಪ್ರಯಾಣ ದರವನ್ನು ಪಾವತಿಸಿದಲ್ಲಿ ಮಂತ್ರಾಲಯ ಹಾಗೂ ಮಹಾನಂದಿಗೆ ಕಾರ್ಯಾಚರಣೆ ಮಾಡಲಾಗುತ್ತದೆ.

ಪ್ರಯಾಣಿಕರು ಸಾರಿಗೆ ಸೌಲಭ್ಯಕ್ಕಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ವಿಭಾಗೀಯ ಸಾರಿಗೆ ಅಧಿಕಾರಿ ಬಾಗಲಕೋಟೆ (7760991752) ಮತ್ತು ಸಹಾಯಕ ಸಂಚಾರಿ ಅಧೀಕ್ಷಕ ವಿಭಾಗೀಯ ಕಚೇರಿ ಬಾಗಲಕೋಟೆ (7760991762) ಇವರನ್ನು ಸಂಪರ್ಕಿಸುವಂತೆ ವಿಭಾಗೀಯ ನಿಯಂತ್ರಣಾಧಿಕಾ–ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಘಟಕಗಳ ಸಂಪರ್ಕಿಸುವ ಮೊನಂ. ಬಾಗಲಕೋಟೆ ಘಟಕ (7760991775), ಜಮಖಂಡಿ (7760991778), ಬಾದಾಮಿ (7760991776), ಇಲಕಲ್ಲ (7760991777), ಮುಧೋಳ (7760991779), ಬೀಳಗಿ (7760991780), ಗುಳೇದಗುಡ್ಡ (7760991781) ಹಾಗೂ ಹುನಗುಂದ ಘಟಕ (9606068611) ಗೆ ಸಂಪರ್ಕಿಸಬಹುದಾಗಿದೆ.

# ಪ್ರಿಯಂಕಾ ಜಾರಕಿಹೊಳಿ ಆಯ್ಕೆ ಮಾಡಿ ಇತಿಹಾಸ ನಿರ್ಮಿಸೋಣ–ಸತೀಶ ಜಾರಕಿಹೊಳಿ

**ರಾಯಬಾಗ :** ಚಿಕ್ಕೋಡಿ ಲೋಕಸಭೆ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಎಲ್ಲರೂ ಒಟ್ಟಾಗಿ ಲೋಕಸಭೆಗೆ ಆಯ್ಕೆ ಮಾಡುವ ಮೂಲಕ ಇತಿಹಾಸ ನಿರ್ಮಿಸೋಣ ಎಂದು ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಶನಿವಾರ ನಸಲಾಪುರ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಪ್ರಿಯಾಂಕಾ ಜಾರಕಿಹೊಳಿ ಅವರು ವಯಸ್ಸಿನಲ್ಲಿ ಚಿಕ್ಕವರಿದ್ದರೂ, ಸಾಮಾಜಿ–ಕ ಸೇವೆಯಲ್ಲಿ ಅಪಾರ ಅನುಭವ ಹೊಂದಿದ್ದಾರೆ. ಕಳೆದ ನಾಲ್ಕೈದು ವರ್ಷಗಳಿಂದ ಜನಸಂಪರ್ಕದಲ್ಲಿದ್ದಾರೆ. ಅವರ ಗೆಲುವಿಗೆ ಎಲ್ಲರೂ ಒಟ್ಟಾಗಿ ಶ್ರಮಿಸೋಣ ಎಂದು ಮನವಿ ಮಾಡಿದರು.

ಕಾಂಗ್ರೆಸ್ ಪಕ್ಷ ಈ ಹಿಂದೆ ಕೇಂದ್ರದಲ್ಲಿ ಅಧಿಕಾರದಲ್ಲಿ ಇದ್ದಾಗ ಹಲವು ಅಭಿವೃದ್ಧಿ ಪರ ಕೆಲಸಗಳನ್ನು ಮಾಡಿದೆ. ಆದರೆ ಪ್ರಚಾರ ಕೈಗೊಂಡಿಲ್ಲ. ಬಿಜೆಪಿಯವರಂತೆ ಸುಳ್ಳು ಹೇಳಿ ಚುನಾವಣೆಯಲ್ಲಿ ಗೆಲ್ಲುವ ಅವಶ್ಯಕತೆ ನಮಗಿಲ್ಲ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗ ಜನಸಾಮಾನ್ಯರನ್ನು ಮೇಲೆತ್ತುವ ಕೆಲಸ ಮಾಡಿದೆ. ಹಾಗಾಗಿ ಲೋಕಸಭಾ ಚುನಾವಣೆಯಲ್ಲಿ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಬೇಕು ಎಂದರು.

ರಾಜ್ಯದ ಕಾಂಗ್ರೆಸ ಸರ್ಕಾರ ಹಲವು ಅಭಿವೃದ್ಧಿ ಕಾರ್ಯಗಳನ್ನು ಮಾಡಿದೆ. ಐದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದಿದೆ. ಬಡವರ ಅಭಿವೃದ್ಧಿಗಾಗಿ ಕಾಂಗ್ರೆಸ್ ಹಗಲಿರುಳೆನ್ನದೆ ದುಡಿಯುತ್ತಿದೆ ಎಂದರು.

ಡಾ. ಎನ್. ಎ. ಮಗದುಮ್ ಮಾತನಾಡಿ, ಪ್ರಿಯಾಂಕಾ ಜಾರಕಿಹೊಳಿ ಅವರು ಯಮಕನಮರಡಿ ಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಕೆಲಸ ಮಾಡಿದ್ದಾರೆ. ಸಚಿವ ಸತೀಶ ಜಾರಕಿಹೊಳಿ ಅವರ ಮಾದರಿಯಲ್ಲಿ ಕೆಲಸ ಮಾಡಿದ್ದಾರೆ.

ಪಕ್ಷವನ್ನು ತೊರೆದಿದ್ದ ಕಾರ್ಯಕರ್ತರು ಮರಳಿ ಕಾಂಗ್ರೆಸ ಪಕ್ಷಕ್ಕೆ ಸಚಿವ ಸತೀಶ ಜಾರಕಿಹೊಳಿ ಅವರ ಸಮ್ಮುಖದಲ್ಲಿ, ಪಕ್ಷದ ಧ್ವಜ ನೀಡುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಬರಮಾಡಿಕೊಂಡರು.

ಯುವ ನಾಯಕ ರಾಹುಲ್ ಜಾರಕಿಹೊಳಿ, ಮಾಜಿ ಶಾಸಕ ಶಾಮ್ ಘಾಟಗೆ, ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಲಕ್ಷ್ಮಣರಾವ ಚಿಂಗಳೆ, ಮಾಜಿ ಸಚಿವ ವೀರಕುಮಾರ ಪಾಟೀಲ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಹಾವೀರ ಮೋಹಿತೆ, ಸಂಜೀವಕುಮಾರ ಬಾನೆ ಸರಕಾರ, ಯಲ್ಲಪ್ಪ ಶಿಂಗೆ, ರಾಜು ಪಾಟೀಲ, ಅಪ್ಪಾಸಾಹೇಬ ಕುಲಗೋಡೆ, ಸಿದ್ಧಾರೂಢ ಬಂಡಗರ, ಹಾಜಿ ಮುಲ್ಲಾ, ಸತ್ತಾರ ಮುಲ್ಲಾ, ಫಾರೂಖ್ ಮೊಮಿನ, ಭಾಹುಸಾಹೇಬ ಪಾಟೀಲ, ಅರ್ಜುನ ನಾಯಿಕವಾಡಿ, ರಾಜು ಪಾಟೀಲ ಸೇರಿದಂತೆ ನೂರಾರು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ಮಹಿಳೆಯರು ಉಪಸ್ಥಿತರಿದ್ದರು.

**ವರದಿ:ಡಾ.ಜಯವೀರ ಎ.ಕೆ.**

## ವಿವಿಧ ಚೆಕ್‌ಪೋಸ್ಟ: ದಾಖಲೆ ಇಲ್ಲದ 6 ಲಕ್ಷ ರೂ. ಜಪ್ತಿ



**ಬಾಗಲಕೋಟೆ :** ಲೋಕಸಭಾ ಚುನಾವಣೆ ಚುನಾವಣೆ ಹಿನ್ನಲೆಯಲ್ಲಿ ಹುನಗುಂದ ಮತಕ್ಷೇತ್ರ ವ್ಯಾಪ್ತಿಯ ನಾಯನೇಗಲಿ ಚೆಕ್‌ಪೋಸ್ಟನಲ್ಲಿ ಸೋಮವಾರ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 6 ಲಕ್ಷ ರೂ.ಗಳನ್ನು ಎಸ್‌ಎಸ್‌ಟಿ ಮತ್ತು ಎಫ್‌ಎಸ್‌ಟಿ ತಂಡ ವಶಕ್ಕೆ ಪಡೆದುಕೊಂಡಿದೆ. ಹೊಸೂರ ಚೆಕ್‌ಪೋಸ್ಟನಲ್ಲಿಯೂ ಸಹ ಎರಡು ಪ್ರತ್ಯೇಕ ಪ್ರಕರಣಗಳಲ್ಲಿ ದಾಖಲೆ ಇಲ್ಲದ 1,06200 ಮತ್ತು 1,25,000 ರೂ.ಗಳ ಹಣವನ್ನು ಜಪ್ತ ಮಾಡಲಾಗಿದೆ ಎಂದು ಬಾಗಲಕೋಟೆ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಸಂತೋಷ ಜಗಲಾಸರ ತಿಳಿಸಿದ್ದಾರೆ.

# ಮಹಿಳಾ ವಿಶೇಷ ಸಂಚಿಕೆ ಲೋಕಾರ್ಪಣೆ

**ಬೆಂಗಳೂರು :** ಹೊಂಬಾಳೆ ಫಿಲ್ಮ್ಸ್‌ನ ಪ್ರಖ್ಯಾತ ಕನ್ನಡ ಚಲನಚಿತ್ರ ನಿರ್ಮಾಪಕರಾದ ಶ್ರೀಯುತ ವಿಜಯ್ ಕಿರಗಂದೂರ್ ('ಕಾಂತಾರ', 'ಕೆಜಿಎಫ್ 1', 'ಕೆಜಿಎಫ್ 2' ಮತ್ತು 'ಯುವ' ಸಿನೆಮಾಗಳ ನಿರ್ಮಾಪಕರು) ಅವರ ನಿವಾಸದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ "ಬಿ ಟ್ರೆಂಡ್ಸ್" ಮಾರ್ಚ್ ತಿಂಗಳ ವಿಶೇಷ ಸಂಚಿಕೆಯನ್ನು ಮಹಿಳೆಯರಿಂದ ಮಹಿಳೆಯರಿಗಾಗಿ ಮಹಿಳೆಯರಿಗೋಸ್ಕರ ಸಿದ್ಧಪಡಿಸಲಾಗಿ–ತ್ತು. ಆರನೇ ವರ್ಷದ ಮೂರನೇ ಆವೃತ್ತಿಯನ್ನು ಶ್ರೀಮತಿ ಶೈಲಜಾ ವಿಜಯ್ ಕಿರಗಂದೂರ್, ಸಾಹಿತಿ ಶ್ರೀಮತಿ ಲತಾ ಕೆ.ಎಸ್.ಹೆಗಡೆ ಮತ್ತು "ಬಿ ಟ್ರೆಂಡ್ಸ್"ನ ಶ್ರೀಯುತ ಹರೀಶ್ ರಾವ್ ಇವರು ವಿಶೇಷ ಸಂಚಿಕೆಯನ್ನು ಲೋಕಾರ್ಪಣೆಗೈದು ಮಹಿಳೆಯರಿಗೆ ಶುಭಕೋರಿದರು.

**ಕಾರ್ಯೇಷು ದಾಸಿ, ಕರಣೇಷು ಮಂತ್ರಿ;**
**ಭೋಜೇಷು ಮಾತಾ, ಶಯನೇಷು ರಂಭ;**
**ರೂಪೇಷು ಲಕ್ಷ್ಮಿ, ಕ್ಷಮಾಯೇಷು ಧರಿತ್ರಿ;**
**ಸತ್ಕರ್ಮ ನಾರಿ, ಕುಲಧರ್ಮ ಪತ್ನಿ ॥**

ಅರ್ಥಾತ್ ಕಾರ್ಯೇಷು ದಾಸಿ ಎಂದರೆ ಶ್ರಮಜೀವಿ. ಕರಣೇಷು ಮಂತ್ರಿ ಅದ್ಭುತ ಸಲಹೆಗಾರ್ತಿ. ರೂಪೇಚ ಲಕ್ಷ್ಮಿ ಎಂದರೆ ಸುಂದರಿ, ಐಶ್ವರ್ಯ ಸಮೃದ್ಧತೆಯ ಪ್ರತೀಕ. ಕ್ಷಮೆಯಾ ಧರಿತ್ರಿಯೆಂದರೆ ಕ್ಷಮಾಶೀಲ ಗುಣವನ್ನು ಹೊಂದಿದಾಕೆ. ಭೋಜ್ಯೇಷು



ಮಾತಾ ಎಂದರೆ ಅನ್ನಪೂರ್ಣೆಯಾಗಿ ಕುಟುಂಬದ ಕಾಳಜಿ, ಮಕ್ಕಳ ಲಾಲನೆ ಪಾಲನೆಗೈಯುವಳು. ಶಯನೇಷು ರಂಭ ಎಂದರೆ ಪ್ರೀತಿ ಪ್ರಣಯದಲ್ಲೂ ಭಾಗಿ. ಇಂತಹ ಸತ್ಕರ್ಮ ನಾರಿಯೇ ಪತ್ನಿಯೆಂದು ನಮ್ಮ ಪೂರ್ವಜರು ಹೆಣ್ಣಿನ ಬಗ್ಗೆ ವ್ಯಾಖ್ಯಾನಿಸಿದ್ದಾರೆ.

ಕಾಲ ಬದಲಾದಂತೆ ಆಚಾರ ವಿಚಾರಗಳು, ಆರ್ಥಿಕ ಸಾಮಾಜಿಕ ಚಿಂತನೆಗಳು ಬದಲಾಗುತ್ತಿವೆ. ಇಂದು ಪುರುಷರಿಗೆ ಸಮನಾಗಿ ಮಹಿಳೆಯು ಸಹ ದುಡಿದು ಆರ್ಥಿಕ ಸ್ವಾವಲಂಬನೆ ಗಳಿಸಿದ್ದಾಳೆ.

ಸ್ತ್ರೀ ಎಂದರೆ ಕೇವಲ ಹೆತ್ತು ಹೊತ್ತು ಪೋಷಣೆ ಮಾಡುವ ಭೋಗದ ವಸ್ತುವಲ್ಲ. ಸ್ತ್ರೀ ಎಂದರೆ ಆದಿಶಕ್ತಿ, ಜಗನ್ಮಾತೆ, ಪರಾಶಕ್ತಿ ದೈವ ಸ್ವರೂಪಿಣಿ ಆಗಿರುವಳು. ಪ್ರಕೃತಿಯೇ ಆಕೆಗೆ ವಿಭಿನ್ನ ದೈಹಿಕ ಸ್ವರೂಪ ನೀಡಿದೆ. ಆಕೆಯ ಮಾನಸಿಕ ಸಮತೋಲನೆ, ದೈಹಿಕ ಕ್ಷಮತೆ, ವಿಭಿನ್ನ ಮತ್ತು ವಿಶಿಷ್ಟವಾದ ಗುಣಗಳು ಆಕೆಗೆ ವಿಶೇಷ ಸ್ಥಾನಮಾನಗಳನ್ನು ನೀಡಿವೆ.

ಸಂಸಾರ, ವೃತ್ತಿ, ಕುಟುಂಬ ಜೀವನದೊಂದಿಗೆ ಬಿಡುವಿನ ವೇಳೆಯಲ್ಲಿ ಸಾಹಿತ್ಯದ ಕೃಷಿಯನ್ನು ಮಾಡುತ್ತ, ವಿವಿಧ ಸಾಹಿತ್ಯ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದವರು ಮತ್ತು ಭಾಗವಹಿಸಿದವರ ಲೇಖನ ಹಾಗು ಕವನಗಳನ್ನು ಈ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲಾಗಿದೆ. ಭಾಗವಹಿಸಿದ ಪ್ರತಿಯೊಬ್ಬ ಮಹಿಳೆಯ–ರಿಗೂ ಹಾರ್ದಿಕ ಅಭಿನಂದನೆಗಳು ಮತ್ತು ಶುಭಾಶಯಗಳನ್ನು ತಿಳಿಸಲಾಯಿತು. ಈ ಕಾರ್ಯಕ್ಕೆ ಸಹಕಾರ ನೀಡಿದ ಚಲನಚಿತ್ರ ನಟ ರಿಷಭ್ ಶೆಟ್ಟಿ ಅಣ್ಣನವರಿಗೆ ಧನ್ಯವಾದಗಳು.

# ಮೂವರು ಬೈಕ್ ಕಳ್ಳರ ಬಂಧನ: 26 ಬೈಕ್ ವಶಕ್ಕೆ



**ವರದಿ:ಲಾಲಸಾಬ ಸವಾರಗೋಳ**

**ವಿಜಯಪುರ :** ನಗರದಲ್ಲಿ ಬೈಕ್ ಕಳ್ಳತನ ಪತ್ತೆ ಹಚ್ಚಿರುವ ಪೊಲೀಸರು ಮೂವರನ್ನು ಬಂಧಿಸಿ, 26 ಬೈಕ್ ಹಾಗೂ 29 ಮೊಬೈಲ್ ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗದ್ದಾರೆ.

ನಗರದ ಗಾಂಧಿಚೌಕ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಬೈಕ್ ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಿಪಿಐ ಮಹಾಂತೇಶ ದಾಮಣ್ಣವರ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆ ನಡೆಸಿ ದಾಳಿ ನಡೆಸಿ ಮೂವರು ಆರೋಪಿಗಳು ಸಮೇತ ಕಳ್ಳತವಾಗಿದ್ದ ಬೈಕ್–ಮೊಬೈಲ್ ವಶಕ್ಕೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಮಂಗಳವಾರ ನಗರದಲ್ಲಿ ತುರ್ತು ಪತ್ರಿಕಾಗೋಷ್ಠಿಯಲ್ಲಿ ವಿಷಯ ತಿಳಿಸಿದ ಎಸ್ಪಿ ಋಷಿಕೇಶ, ಬಂಧಿತರಿಂದ 26 ವಿವಿಧ ಕಂಪನಿಯ ಬೈಕ್ ಗಳು ಹಾಗೂ 29 ಮೊಬೈಲ್ ಗಳು ವಶಪಡಿಸಿಕೊಳ್ಳಲಾಗಿದೆ. ಬಂಧಿತ ಮೂವರು ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ವಿವರಿಸಿದರು.

ಬಂಧಿತರನ್ನು ವಿಜಯಪುರ ನಗರದ ಜೆಎಂ ರಸ್ತೆ ಕೆ.ಎಚ್.ಬಿ. ಕಾಲೋನಿ ನಿವಾಸಿಗಳಾದ ಮೊಶೀನ್ ಕಲಾದಗಿ, ಸದ್ದಾಂ ಮುತವಲ್ಲಿ ಹಾಗೂ ನಗರದ ಯೋಗಾಪುರ ನಿವಾಸಿಯಾಗಿರುವ ಬಾಗಲಕೋಟೆ ಜಿಲ್ಲೆ ಮುಧೋಳ ತಾಲೂಕಿನ ಚಿಂಚಗಂಡಿ ಗ್ರಾಮದ ಸುನೀಲ ಗಡ್ಡಿ ಬಂಧಿತರು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State